# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 02 ಸಂಚಿಕೆ – 110 | ಆರ್‌ಎನ್‌ಐ ನಂ: ಕೆಎಆರ್‌ಕೆಎಎನ್/2023/88462 | ಚಿತ್ರದುರ್ಗ | ದಿನಾಂಕ: 15-11-2024 ಶುಕ್ರವಾರ | ಪುಟ: 4 | ಬೆಲೆ : ರೂ.2-00
Volume - 02 Issue - 110 | RNI No: KARKAN/2023/88462 | Chitradurga | Date: 15-11-2024 Friday | Page: 4 | Price: Rs. 2-00



ಒಳಪುಟದ ಸುದ್ದಿಗಳು

ಮಧುಮೇಹ ಮುಕ್ತ ಗ್ರಾಮ ನಿರ್ಮಿಸಿ: ಟಿಹೆಚ್‌ಒ ಡಾ.ಗಿರೀಶ್ 2

ಮಣ್ಣಿನ ಫಲವತ್ತತೆ ಹೆಚ್ಚಿಸಲು ಹಸಿರೆಲೆಗೊಬ್ಬರ ಅಗತ್ಯ 3

ಓದುವ ಅಭ್ಯಾಸ ಅಳವಡಿಸಿಕೊಂಡರೆ ಉತ್ತಮ ಸಾಧನೆ ಮಾಡಲು ಸಾಧ್ಯ 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ಇಂದು ಭಾರತ ಸಹಕಾರ ಸಪ್ತಾಹ ಕಾರ್ಯಕ್ರಮ

» ಚಿತ್ರದುರ್ಗ

ಬೆಂಗಳೂರಿನ ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳಿ ನಿಯಮಿತ, ಕರ್ನಾಟಕ ರಾಜ್ಯ ಸಹಕಾರ ಎಣ್ಣೆ ಬೀಜ ಬೆಳೆಗಾರರ ಮಹಾಮಂಡಳಿ, ಕರ್ನಾಟಕ ರಾಜ್ಯ ಸಹಕಾರ ಕುಕ್ಕುಟ ಮಹಾಮಂಡಳಿ, ಕರ್ನಾಟಕ ರಾಜ್ಯ ನೂಲಿನ ಗಿರಣಿಗಳ ಮಹಾಮಂಡಳಿ, ಚಿತ್ರದುರ್ಗ ಜಿಲ್ಲಾ ನೂಲಿನ ಗಿರಣಿಗಳ ಮಹಾಮಂಡಳಿ, ಶಿವಮೊಗ್ಗ, ದಾವಣಗೆರೆ ಮತ್ತು ಚಿತ್ರದುರ್ಗ ಜಿಲ್ಲಾ ಸಹಕಾರ ಹಾಲು ಒಕ್ಕೂಟ, ಚಿತ್ರದುರ್ಗ ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್ ಹಾಗೂ ಜಿಲ್ಲೆಯ ಎಲ್ಲಾ ರೀತಿಯ ಸಹಕಾರಿ ಸಂಸ್ಥೆಗಳು, ಬ್ಯಾಂಕ್‌ಗಳು ಸೌಹಾರ್ದ ಸಹಕಾರಿಗಳು ಮತ್ತು ಸಹಕಾರ ಇಲಾಖೆ ಸಹಯೋಗದಲ್ಲಿ ಇದೇ ನ.15ರಂದು ಬೆಳಿಗ್ಗೆ 11 ಗಂಟೆಗೆ ನಗರದ ಶ್ರೀರಾಮ ಕಲ್ಯಾಣ ಮಂಟಪದಲ್ಲಿ 71ನೇ ಅಖಿಲ ಭಾರತ ಸಹಕಾರ ಸಪ್ತಾಹ–2024 ಕಾರ್ಯಕ್ರಮ ಆಯೋಜಿಸಲಾಗಿದೆ.

ಸಹಕಾರ ಸಚಿವ ಕೆ.ಎನ್.ರಾಜಣ್ಣ ಕಾರ್ಯಕ್ರಮ ಉದ್ಘಾಟಿಸುವರು. ಯೋಜನೆ ಮತ್ತು ಸಾಂಖ್ಯಿಕ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ, ಮತ್ತು ಜಿಲ್ಲಾ ಸಹಕಾರ ಬ್ಯಾಂಕ್ ಅಧ್ಯಕ್ಷ ಡಿ.ಸುಧಾಕರ್ ಸಹಕಾರ ಧ್ವಜಾರೋಹಣ ಮಾಡಲಿದ್ದಾರೆ. ಸಂಸದ ಗೋವಿಂದ ಎಂ ಕಾರಜೋಳ ವಸ್ತು ಪ್ರದರ್ಶನ ಉದ್ಘಾಟಿಸುವರು. ಶಾಸಕರು ಹಾಗೂ ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳಿ ಅಧ್ಯಕ್ಷ ಜಿ.ಟಿ.ದೇವೇಗೌಡ ಸಹಕಾರ ವಾರ ಪತ್ರಿಕೆ ವಿಶೇಷ ಸಂಚಿಕೆ ಬಿಡುಗಡೆ ಮಾಡುವರು. ಶಾಸಕ ಕೆ.ಸಿ.ವೀರೇಂದ್ರ(ಪಪ್ಪಿ) ಅಧ್ಯಕ್ಷತೆ ವಹಿಸುವರು. ಕಾರ್ಯಕ್ರಮದಲ್ಲಿ ಕರ್ನಾಟಕ ಆಹಾರ ಮತ್ತು ನಾಗರೀಕ ಸರಬರಾಜು ನಿಗಮದ ಅಧ್ಯಕ್ಷ ಹಾಗೂ ಹೊಸದುರ್ಗ ಶಾಸಕ ಬಿ.ಜಿ.ಗೋವಿಂದಪ್ಪ, ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕ ಅಭಿವೃದ್ಧಿ ನಿಗಮದ ಅಧ್ಯಕ್ಷ ಚಳ್ಳಕೆರೆ ಶಾಸಕ ಟಿ.ರಘುಮೂರ್ತಿ, ಮೊಳಕಾಲ್ಮೂರು ಶಾಸಕ ಎನ್.ವೈ.ಗೋಪಾಲಕೃಷ್ಣ, ಹೊಳಲ್ಕೆರೆ ಶಾಸಕ ಡಾ.ಎಂ.ಚಂದ್ರಪ್ಪ ಹಾಗೂ ವಿಧಾನ ಪರಿಷತ್ ಸದಸ್ಯರಾದ ಚಿದಾನಂದ ಎಂ ಗೌಡ, ಕೆ.ಎಸ್.ನವೀನ್, ಡಿ.ಟಿ.ಶ್ರೀನಿವಾಸ್, ಕರ್ನಾಟಕ ಸಹಕಾರ ಎಣ್ಣೆ ಬೀಜ ಬೆಳೆಗಾರರ ಮಹಾಮಂಡಳಿ ಅಧ್ಯಕ್ಷ ವೆಂಕಟರಾವ್ ನಾಡಗೌಡ ಸೇರಿದಂತೆ ಸಹಕಾರ ಮಂಡಳಿ ಅಧ್ಯಕ್ಷರು, ಉಪಾಧ್ಯಕ್ಷರು ಹಾಗೂ ಆಡಳಿತ ಮಂಡಳಿ ಸದಸ್ಯರು, ವಿವಿಧ ಮಹಾಮಂಡಳಿಗಳು. ಜಿಲ್ಲಾ ಒಕ್ಕೂಟಗಳು ಮತ್ತು ಎಲ್ಲಾ ಸಹಕಾರ ಸಂಘ–ಸಂಸ್ಥೆಗಳು ಹಾಗೂ ಸಹಕಾರ ಇಲಾಖೆ ಅಧಿಕಾರಿ, ಸಿಬ್ಬಂದಿ ವರ್ಗದವರು ಭಾಗವಹಿಸುವರು.

### ನ.18 ಸಂತಶ್ರೇಷ್ಠ ಭಕ್ತ ಕನಕದಾಸ ಜಯಂತಿ

» ಚಿತ್ರದುರ್ಗ

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ನಗರಸಭೆ, ಜಿಲ್ಲಾ ಕುರುಬರ ಸಮಾಜದ ಸಂಯುಕ್ತಾಶ್ರಯದಲ್ಲಿ ನ.18 ರಂದು ಮಧ್ಯಾಹ್ನ 12 ಗಂಟೆಗೆ ನಗರದ ತ.ರಾ.ಸು ರಂಗಮಂದಿರದಲ್ಲಿ ಸಂತಶ್ರೇಷ್ಠ ಭಕ್ತ ಕನಕದಾಸ ಜಯಂತಿ ಆಚರಣೆ ಸಮಾರಂಭ ಕಾರ್ಯಕ್ರಮ ಆಯೋಜಿಸಲಾಗಿದೆ.ಯೋಜನಾ ಮತ್ತು ಸಾಂಖ್ಯಿಕ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಕಾರ್ಯಕ್ರಮ ಉದ್ಘಾಟಿಸುವರು. ವಿಶೇಷ ಆಹ್ವಾನಿತರಾಗಿ ಸಂಸದ ಗೋವಿಂದ ಎಂ ಕಾರಜೋಳ ಭಾಗವಹಿಸುವರು. ಶಾಸಕ ಕೆ.ಸಿ.ವೀರೇಂದ್ರ (ಪಪ್ಪಿ) ಅಧ್ಯಕ್ಷತೆ ವಹಿಸುವರು. ಕೊಪ್ಪಳ ವಿಶ್ವವಿದ್ಯಾಲಯದ ಕುಲಪತಿ ಡಾ.ಬಿ.ಕೆ.ರವಿ ಉಪನ್ಯಾಸ ನೀಡುವರು.ಅತಿಥಿಗಳಾಗಿ ಶಾಸಕರಾದ ಬಿ.ಜಿ.ಗೋವಿಂದಪ್ಪ, ಟಿ.ರಘುಮೂರ್ತಿ, ಎನ್.ವೈ.ಗೋಪಾಲಕೃಷ್ಣ, ಡಾ.ಎಂ.ಚಂದ್ರಪ್ಪ, ವಿಧಾನ ಪರಿಷತ್ ಸದಸ್ಯರಾದ ಚಿದಾನಂದ ಎಂ ಗೌಡ, ಕೆ.ಎಸ್.ನವೀನ್, ಡಿ.ಟಿ.ಶ್ರೀನಿವಾಸ, ಕರ್ನಾಟಕ ದ್ರಾಕ್ಷರಸ ಮಂಡಳಿ ಅಧ್ಯಕ್ಷ ಡಾ.ಬಿ.ಯೋಗೇಶ್ ಬಾಬು, ಕರ್ನಾಟಕ ಆದಿಜಾಂಬವ ಅಭಿವೃದ್ಧಿ ನಿಗಮದ ಅಧ್ಯಕ್ಷ ಜಿ.ಎಸ್.ಮಂಜುನಾಥ್, ಕರ್ನಾಟಕ ಸಫಾಯಿ ಕರ್ಮಚಾರಿ ಆಯೋಗದ ಅಧ್ಯಕ್ಷೆ ಸವಿತಾ ರಘು, ನಗಾರಭಿವೃದ್ಧಿ ಅಧ್ಯಕ್ಷ ತಾಜ್‌ಪೀರ್, ನಗರಸಭೆ ಅಧ್ಯಕ್ಷೆ ಸುಮಿತಾ ಬಿ.ಎನ್ ರಾಘವೇಂದ್ರ, ಚಿತ್ರದುರ್ಗ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಅಮ್ಲಾನ್ ಆದಿತ್ಯ ಬಿಸ್ವಾಸ್, ಜಿಲ್ಲಾಧಿಕಾರಿ ಟಿ.ವೆಂಕಟೇಶ್, ಜಿ.ಪಂ. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ.ಸೋಮಶೇಖರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರಂಜಿತ್ ಕುಮಾರ್ ಬಂಡಾರು, ಜಿಲ್ಲಾ ಕುರುಬರ ಸಂಘದ ಅಧ್ಯಕ್ಷ ಎಸ್.ಶ್ರೀರಾಮ್, ಕಾರ್ಯದರ್ಶಿ ಬಿ.ಟಿ.ಜಗದೀಶ್, ತಾಲ್ಲೂಕು ಅಧ್ಯಕ್ಷ ಕೆ.ಓಂಕಾರಪ್ಪ ಸೇರಿದಂತೆ ಜಿಲ್ಲೆಯ ಸಮಸ್ತ ಗೌರವಾನ್ವಿತ ಜನಪ್ರತಿನಿಧಿಗಳು, ಕುರುಬ ಸಮಾಜದ ಮುಖಂಡರು ಭಾಗವಹಿಸುವರು.

### ರೈತ ಸಂಘದ ಧರಣಿಸತ್ಯಾಗ್ರಹ ಸ್ಥಳಕ್ಕೆ ಶಾಸಕ ಟಿ.ರಘುಮೂರ್ತಿ ಹಾಗೂ ಅಧಿಕಾರಿಗಳ ತಂಡ ಭೇಟಿ

# ಬೇಡಿಕೆಗಳ ಈಡೇರಿಕೆಗೆ ಸಕರಾತ್ಮಕ ಸ್ಪಂದನೆ

» ಚಳ್ಳಕೆರೆ

ಕಳೆದ ಸುಮಾರು ಹತ್ತಾರು ವರ್ಷಗಳಿಂದ ಚಳ್ಳಕೆರೆ ನಗರಕ್ಕೆ ಗ್ರಾಮಾಂತರ ಪೊಲೀಸ್ ಠಾಣೆ, ಜಾಜೂರು ಉಪಠಾಣೆಯನ್ನು ಪೊಲೀಸ್ ಠಾಣೆಯಾಗಿ ಪರಿವರ್ತನೆ, ನಗರದ ತಾಲ್ಲೂಕು ಕಚೇರಿಯಲ್ಲಿ ಉಪವಿಭಾಗಾಧಿಕಾರಿಗಳ ಹಾಗೂ ಆರ್‌ಟಿಒ(ಸಾರಿಗೆ) ಅಧಿಕಾರಿಗಳ ಕಚೇರಿಯನ್ನು ಪ್ರಾರಂಭಿಸಬೇಕೆಂದು ಒತ್ತಾಯಿಸಿ ಕರ್ನಾಟಕ ರಾಜ್ಯ ರೈತ ಸಂಘ ಹಿರಿಯ ಉಪಾಧ್ಯಕ್ಷ ಕೆ.ಪಿ.ಭೂತಯ್ಯ ನೇತೃತ್ವದಲ್ಲಿ ಪೊಲೀಸ್ ಠಾಣೆಯ ಮುಂಭಾಗದಲ್ಲಿ ಧರಣಿ ಸತ್ಯಾಗ್ರಹ ನಡೆಸಿ, ನಮ್ಮ ಎಲ್ಲಾ ಬೇಡಿಕೆಗಳನ್ನು ಸಾರ್ವಜನಿಕ ಹಿತದೃಷ್ಠಿಯಿಂದ ಈಡೇರಿಸುವಂತೆ ಒತ್ತಾಯಿಸಿದರು.

ರೈತ ಸಂಘದ ನೂರಾರು ಮುಖಂಡ ಪೊಲೀಸ್ ಠಾಣೆ ಮುಂಭಾಗದಲ್ಲಿ ಪ್ರತಿಭಟನೆ ನಡೆಸುತ್ತಿರುವ ಬಗ್ಗೆ ಮಾಹಿತಿ ಪಡೆದ ಕ್ಷೇತ್ರದ ಶಾಸಕ, ಸಣ್ಣಕೈಗಾರಿಕೆ ಅಭಿವೃದ್ಧಿಮಂಡಳಿ ಅಧ್ಯಕ್ಷ ಟಿ.ರಘುಮೂರ್ತಿ, ಸ್ಥಳಕ್ಕೆ ಭೇಟಿ ನೀಡಿ ರೈತ ಮುಖಂಡರೊಡನೆ ಬೇಡಿಕೆಗಳ ಬಗ್ಗೆ ಸೌಹಾರ್ಧ ಚರ್ಚೆ ನಡೆಸಿದರು. ಪೊಲೀಸ್ ಇಲಾಖೆ ಪರವಾಗಿ ಹೆಚ್ಚುವರಿ ರಕ್ಷಣಾಧಿಕಾರಿ ಎಸ್.ಜೆ.ಕುಮಾರಸ್ವಾಮಿ, ಜಿಲ್ಲಾಧಿಕಾರಿಗಳ ಪರವಾಗಿ ಉಪವಿಭಾಗಾಧಿಕಾರಿ ಎಂ.ಕಾರ್ತಿಕ್, ತಹಶೀಲ್ದಾರ್ ರೇಹಾನ್‌ಪಾಷ, ರೈತರೊಡನೆ ಸುಧೀರ್ಘ ಚರ್ಚೆ ನಡೆಸಿದರು.



ಶಾಸಕ ಟಿ.ರಘುಮೂರ್ತಿ ಮಾತನಾಡಿ, ರೈತ ಸಂಘದ ಹಿರಿಯ ಉಪಾಧ್ಯಕ್ಷ ಕೆ.ಪಿ.ಭೂತಯ್ಯ ಮತ್ತು ರೈತ ಸಂಘದ ಪದಾಧಿಕಾರಿಗಳು ತಾಲ್ಲೂಕಿನ ಸಾರ್ವಜನಿಕರಹಿತದೃಷ್ಠಿಯಿಂದ ನಾಲ್ಕು ಪ್ರಮುಖ ಬೇಡಿಕೆಗಳನ್ನು ಮುಂದಿಟ್ಟು ಹೋರಾಟ ನಡೆಸುತ್ತಿದ್ದಾರೆ. ನಿಮ್ಮ ಹೋರಾಟ ಮತ್ತು ಜನಪರ ಕಾಳಜಿಯ ಬಗ್ಗೆ ನನಗೆ ತೃಪ್ತಿ ಇದೆ. ಪ್ರಸ್ತುತ ರಾಜ್ಯ ಸರ್ಕಾರ ರೈತ ಹಿತವನ್ನು ಕಾಪಾಡುವಲ್ಲಿ ಎಂದೂ ಹಿಂದೆ ಬಿದ್ದಿಲ್ಲ. ಪ್ರಸ್ತುತ ಚಳ್ಳಕೆರೆ ನಗರಕ್ಕೆ ಗ್ರಾಮೀಣ ಪೊಲೀಸ್ ಠಾಣೆ, ಜಾಜೂರು ಉಪಠಾಣೆ ಮೇಲ್ದರ್ಜೆ ಕುರಿತು ನಾನು 2013ರಲ್ಲೇ ಪ್ರಥಮ ಬಾರಿ ಶಾಸಕನಾಗಾದ ಅಂದಿನ ಗೃಹಸಚಿವ ಕೆ.ಎ.ಜಾರ್ಜ್‌ರವರಿಗೆ ಮನವಿ ಮಾಡಿದ್ದೆ. ಆದರೆ, ಕೆಲವೊಂದು ನಿಯಮಗಳನ್ನು ಕಡ್ಡಾಯವಾಗಿ ಪಾಲಿಸಬೇಕಾದ್ದರಿಂದ ಇವುಗಳನ್ನು ಕಾರ್ಯರೂಪಕ್ಕೆ ತರಲು ಸಾಧ್ಯವಾಗಿಲ್ಲ. ಮತ್ತೊಮ್ಮೆ ಜನರ ಹಿತದೃಷ್ಠಿಯಿಂದ ಮಾನ್ಯಮುಖ್ಯಮಂತ್ರಿಗಳು, ಗೃಹ ಸಚಿವರನ್ನು ಭೇಟಿ ಮಾಡಿ ಚರ್ಚಿಸುವೆ. ಉಪವಿಭಾಗಾಧಿಕಾರಿ ಕಚೇರಿ ಕುರಿತು ಕಂದಾಯ ಸಚಿವ ಕೃಷ್ಣಬೈರೇಗೌಡ, ಆರ್‌ಟಿಒ ಕಚೇರಿ ಕುರಿತು ಸಚಿವ ರಾಮಲಿಂಗಾರೆಡ್ಡಿಯವರೊಂದಿಗೆ ಚರ್ಚಿಸಿ ಕ್ರಮಕೈಗೊಳ್ಳುವ ಭರವಸೆ ನೀಡಿದರು.

ಮನವಿ ಅರ್ಪಿಸಿ ಮಾತನಾಡಿದ ಕೆ.ಪಿ.ಭೂತಯ್ಯ, ಕಳೆದ ಸುಮಾರು 12 ವರ್ಷಗಳಿಂದ ನಮ್ಮ ಹೋರಾಟ ನಡೆಯುತ್ತಲೇ ಇದೆ. ಆದರೆ, ಸರ್ಕಾರದ ಸ್ಪಂದನೆ ಮಾತ್ರ ನಿರೀಕ್ಷಿತ ಮಟ್ಟದಲ್ಲಿ ಆಗಿಲ್ಲ. ಶಾಸಕರು ಭರವಸೆ ನೀಡಿದ ಹಿನ್ನಲೆಯಲ್ಲಿ ಮುಷ್ಕರ ವಾಪಸ್ ಪಡೆದು ಸಹಕಾರ ನೀಡುತ್ತೇವೆಂದರು.

ಹೆಚ್ಚುವರಿ ರಕ್ಷಣಾಧಿಕಾರಿ ಎಸ್.ಜೆ.ಕುಮಾರಸ್ವಾಮಿ ಮಾತನಾಡಿ, ಚಳ್ಳಕೆರೆ ನಗರ ಠಾಣಾ ವ್ಯಾಪ್ತಿಯಲ್ಲಿ ಸಾಕಷ್ಟು ಪ್ರಕರಣಗಳು ದಾಖಲಾಗುತ್ತಿವೆ. ಆದರೆ, ಗ್ರಾಮೀಣ ಠಾಣೆ ಆರಂಭಿಸಲು ಗೃಹ ಇಲಾಖೆಗೆ ತನ್ನದೇಯಾದ ನಿಯಮಗಳಿವೆ. ಈ ಬಗ್ಗೆ ಈಗಾಗಲೇ ಮಾನ್ಯ ರಕ್ಷಣಾಧಿಕಾರಿಗಳು, ಶಾಸಕರು ಚರ್ಚೆ ನಡೆಸಿದ್ದಾರೆ. ಸರ್ಕಾರದಿಂದ ಆದೇಶ ಬಂದಕೂಡಲೇ ಗ್ರಾಮೀಣ ಠಾಣೆ ಆರಂಭಿಸಲಾಗುವುದು ಎಂದರು.

ಮನವಿ ಸ್ವೀಕರಿಸಿ ಮಾತನಾಡಿದ ಉಪವಿಭಾಗಾಧಿಕಾರಿ ಎಂ.ಕಾರ್ತಿಕ್, ಜಿಲ್ಲಾಧಿಕಾರಿಗಳು ಈ ಬಗ್ಗೆ ಈಗಾಗಲೇ ಸಂಪೂರ್ಣ ಮಾಹಿತಿ ನೀಡಲಾಗಿದೆ. ಅವರೂ ರಾಜ್ಯ ಸರ್ಕಾರಕ್ಕೆ ಸಂಪೂರ್ಣ ವರದಿಯನ್ನು ಕಳಿಸಿಕೊಟ್ಟಿದ್ದು, ಸರ್ಕಾರದ ಮಟ್ಟದಲ್ಲಿ ತೀರ್ಮಾನ ಕೈಗೊಳ್ಳಬೇಕಿದೆ. ದಯಮಾಡಿ ರೈತರು ಸಹಕರಿಸುವಂತೆ ಮನವಿ ಮಾಡಿದರು.

ಪ್ರತಿಭಟನೆಯಲ್ಲಿ ಜಿಲ್ಲಾಧ್ಯಕ್ಷ ಧನಂಜಯ, ರೈತಮುಖಂಡಎಚ್.ರಾಮಚಂದ್ರಪ್ಪ,ಆರ್.ರಾಜಣ್ಣ, ಜೆ.ಗುರುಮೂರ್ತಿ, ಟಿ.ಹಂಪಣ್ಣ, ಜೆ.ಎಚ್.ತಿಪ್ಪೇಸ್ವಾಮಿ, ಎನ್.ತಿಪ್ಪೇಸ್ವಾಮಿ ಮುಂತಾದವರು ಭಾಗವಹಿಸಿದ್ದರು.

## ವಾಯುಮಾಲಿನ್ಯ ದುಷ್ಪರಿಣಾಮ ಕುರಿತು ಜಾಗೃತಿ

» ಚಿತ್ರದುರ್ಗ

ಪ್ರಾದೇಶಿಕ ಸಾರಿಗೆ ಇಲಾಖೆ ವತಿಯಿಂದ ಪ್ರತಿ ವರ್ಷ ನವೆಂಬರ್ ಮಾಹೆಯಲ್ಲಿ ವಾಯುಮಾಲಿನ್ಯ ನಿಯಂತ್ರಣ ಮಾಸಾಚರಣೆ ಆಚರಿಸಲಾಗುತ್ತಿದ್ದು, ವಾಹನಗಳ ಪ್ರದೋಷಣೆಯಿಂದ ಪರಿಸರದ ಮೇಲೆ ಆಗುವ ದುಷ್ಪರಿಣಾಮಗಳನ್ನು ತಡೆಗಟ್ಟುವ ಹಿನ್ನಲೆಯಲ್ಲಿ ವಾಯುಮಾಲಿನ್ಯ ನಿಯಂತ್ರಣ ಜಾಗೃತಿ ಮೂಡಿಸಲಾಗುತ್ತಿದೆ ಎಂದು ಪ್ರಾದೇಶಿಕ ಸಾರಿಗೆ ಅಧಿಕಾರಿ ಭರತ್ ಎಂ ಕಾಳೇಸಿಂಘೆ ತಿಳಿಸಿದರು. ನಗರದ ಎಸ್‌ಆರ್‌ಎಸ್ ಪಿಯು ಕಾಲೇಜಿನಲ್ಲಿ ಬುಧವಾರ ಪ್ರಾದೇಶಿಕ ಸಾರಿಗೆ ಇಲಾಖೆ, ಶಿಕ್ಷಣ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಪೊಲೀಸ್ ಇಲಾಖೆ, ಸಾರ್ವಜನಿಕ ಶಿಕ್ಷಣ ಇಲಾಖೆ, ಪದವಿಪೂರ್ವ ಶಿಕ್ಷಣ ಇಲಾಖೆ ಹಾಗೂ ಖಾಸಗಿ ಶಾಲಾ ಮುಖ್ಯಸ್ಥರ ಉಪಸ್ಥಿತಿಯಲ್ಲಿ ಹಮ್ಮಿಕೊಂಡಿದ್ದ ಜಿಲ್ಲಾ ಮಕ್ಕಳ ರಕ್ಷಣಾ ಸಮಿತಿ ಸಭೆ ಹಾಗೂ 2024–25ನೇ ಸಾಲಿನ ನವೆಂಬರ್ ಮಾಹೆಯಲ್ಲಿ



ವಾಯುಮಾಲಿನ್ಯ ದುಷ್ಪಾರಿಣಾಮಗಳ ಕುರಿತು ಜಾಗೃತಿ ಮೂಡಿಸುವ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ನವೆಂಬರ್–2024ರ ಮಾಹೆಯಲ್ಲಿ ವಾಯುಮಾಲಿನ್ಯ ನಿಯಂತ್ರಣ ಮಾಸಾಚರಣೆ ಆಚರಿಸಲಾಗುತ್ತಿದ್ದು, ಒಂದು ತಿಂಗಳ ಕಾಲ ವಾಯುಮಾಲಿನ್ಯದ ಬಗ್ಗೆ ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಹಮ್ಮಿಕೊಂಡು, ಈ ಸಂಬಂಧ ಬಿತ್ತಿಪತ್ರಗಳನ್ನು ಹಾಗೂ ಕರಪತ್ರಗಳನ್ನು ಹಂಚಲಾಗುತ್ತಿದ್ದು, ವಾಯುಮಾಲಿನ್ಯ ದುಷ್ಪರಿಣಾಮಗಳ ಕುರಿತು ಅರಿವು ಮೂಡಿಸಲಾಗುತ್ತಿದೆ ಎಂದು ಹೇಳಿದರು.

## ಜ.12 ರಿಂದ ಬಾಗಲಕೋಟೆಯ ಕೂಡಲಸಂಗಮದಲ್ಲಿ ಶರಣ ಮೇಳ



» ಚಿತ್ರದುರ್ಗ

2025ರ ಜನವರಿಯಲ್ಲಿ 12,13ಹಾಗೂ14ರಂದು ಬಾಗಲಕೋಟೆಯ ಹುನಗುಂದ ತಾಲ್ಲೂಕಿನ ಕೂಡಲಸಂಗಮದಲ್ಲಿ 38ನೇ ಶರಣ ಮೇಳ ನಡೆಯಲಿದೆ ಎಂದು ಕೂಡಲ ಸಂಗಮದ ಬಸವಧರ್ಮ ಪೀಠದ ಕಾರ್ಯಾಧ್ಯಕ್ಷರಾದ ಜಗದ್ಗುರು ಗಂಗಾದೇವಿ ಮಾತಾಜಿಯವರು ತಿಳಿಸಿದರು.ಚಿತ್ರದುರ್ಗ ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮಹಾ ಮಾನವತಾದಿ ಲಿಂಗಾಯತ ಧರ್ಮ ಸಂಸ್ಥಾಕ ಧರ್ಮಗುರು ಬಸವಣ್ಣನವರ ಸಂದೇಶಗಳಲ್ಲಿ ನಂಬಿಕೆ ಇಟ್ಟು ನಡೆಯುವ ಬಸವ ಭಕ್ತರು ಹಾಗೂ ಜಾತಿ, ಮತ,ಪಂಥಗಳ ಬೇಧವಿಲ್ಲದೆ ಎಲ್ಲರೂ ಒಂದೂ ಎಂದು ಸಮಾನಾತ ಭಾವವುಳ್ಳ ಎಲ್ಲಾ ಶರಣರು ಸೇರಿ ನಡೆಸುವ ಮೇಳವೇ ಶರಣ ಮೇಳವಾಗಿದೆ.


ಪುಟ 2


### ಪ್ರಮುಖ ಸುದ್ದಿ

# ಜಾತಿಯ ಎಲ್ಲೆಯನ್ನು ಮೀರಿ ಬದುಕಿ: ಗೋಪಾಲಪ್ಪ ಹೇಳಿಕೆ

» ಹೊಸದುರ್ಗ

ಭಾರತದೇಶದಲ್ಲಿಸರ್ವಜನಾಂಗದವರಿಗೂ ಬದುಕಲು ಸಮಾನ ಅವಕಾಶವಿದ್ದು ಪ್ರೀತಿ ವಿಶ್ವಾಸ ಸಹಬಾಳ್ವೆಯಿಂದ ಬದುಕಬೇಕು ಅದನ್ನು ಬಿಟ್ಟು ಯಾರಾದರೂ ಜಾತಿ ನಿಂದನೆ ಅಸ್ಪೃಶ್ಯತೆ ಮಾಡಿದರೆ ಭಾರತ ಸಂವಿಧಾನದಲ್ಲಿ ಕಾನೂನಿನ ಮೂಲಕ ಶಿಕ್ಷೆ ಆಗಲಿದೆ ಎಂದು ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕ ಗೋಪಾಲಪ್ಪ ಹೇಳಿದರು.

ತಾಲೂಕಿನ ಶ್ರೀರಾಂಪುರ ಮತ್ತು ಕೇಲ್ಲೋಡು ಗ್ರಾಮಗಳಲ್ಲಿ ತಾಲೂಕು ಆಡಳಿತ, ತಾಲೂಕು ಪಂಚಾಯಿತಿ, ಸಮಾಜ ಕಲ್ಯಾಣ ಇಲಾಖೆ, ಪೋಲಿಸ್ ಇಲಾಖೆ, ಶಿಕ್ಷಣ ಇಲಾಖೆ ಹಾಗೂ ಮಡಿಲು ಸಂಸ್ಥೆ ಸಹಯೋಗದೊಂದಿಗೆ ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡಗಳ ಮೇಲೆ ನಡೆಯುವ ದೌರ್ಜನ್ಯ ಕುರಿತು ಅರಿವು ಮೂಡಿಸುವ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಸಮಾಜದಲ್ಲಿ ನಾವು ಪ್ರತಿಯೊಬ್ಬರನ್ನು ಪ್ರೀತಿ ವಿಶ್ವಾಸದ ಮೂಲಕ ಗೆಲ್ಲಬೇಕು. ಹೆಚ್ಚಿನದಾಗಿ ಅಂತರ್ಜಾತಿ ವಿವಾಹವಾಗಬೇಕು ಆಗ ಮಾತ್ರ ಅಸ್ಪೃಶ್ಯತೆ ನಿವಾರಣೆ ಆಗಲು ಅನೂಕುಲವಾಗುತ್ತದೆ. ಜಾತಿನಿಂದನೆಮಾಡಿದರೆಸಂವಿಧಾನದಲ್ಲಿನ ಕನೂನಿನ ಮೂಲಕ ಕಠಿಣ ಕಾನೂನು ಇದೆ ಎಂದರು.



ಸಂವಿಧಾನ ಬರುವ ಮೊದಲು ದಲಿತರು ದೇವಸ್ಥಾನ, ಹೋಟೆಲ್ ಗಳಿಗೆ ಹೋದಾಗ ಸವರ್ಣಿಯರು ದೂರ ನಿಲ್ಲಿಸುವುದರ ಮೂಲಕ ಕ್ರೂರವಾಗಿ ನೋಡುತ್ತಿದ್ದರು.

ದಲಿತರ ಸ್ಥಾನಮಾನಗಳ ಹಿಂದಿನ ಕಾಲದಲ್ಲಿ ಯಾವ ರೀತಿ ಇತ್ತು ಎಂಬುವುದನ್ನ ಮಡಿಲು ಸಂಸ್ಥೆಯ ವತಿಯಿಂದ ನಡೆಸುತ್ತಿರುವ ಕಿರು ನಾಟಕವೇ ಸಾಕ್ಷಿ ಸಮಾಜ ಕಲ್ಯಾಣ ಇಲಾಖೆಯಿಂದ ಅಂತರ್ಜಾತಿ ವಿವಾಹವಾದರೆ ಸಹಾಯಧನ ಇದೆ ಹಾಗೂ ವಿವಿಧ ರೀತಿಯ ಸೌಲಭ್ಯಗಳನ್ನು ಪಡೆದುಕೊಳ್ಳಿ ಎಂದು ಹೇಳಿದರು.

ಡಿಎ□□□ಸ್ ಮುಖಂಡ ಕೈನೋಡು ಚಂದ್ರಪ್ಪ ಮಾತನಾಡಿ ದೇಶದಲ್ಲಿ ಸ್ವಾತಂತ್ರ್ಯ ಬಂದು ಹಲವು ವರ್ಷಗಳ ಕಳೆದರೂ ಅಸ್ಪೃಶ್ಯತೆ ಎಂಬುದು ಇನ್ನೂ ನಿವಾರಣೆ ಆಗಿಲ್ಲ. ಇದರಿಂದ ಸಂವಿಧಾನ ಬರುವುದಕ್ಕೂ ಮೊದಲು ದಲಿತರು ಎಲ್ಲಿಯೂ ಸಹ ಓಡಾಡಬಾರದು ಅಂತ ಪರಿಸ್ಥಿತಿ ಇದ್ದು ಅವರು ಓಡಾಡಬೇಕೆಂದರೆ ಸೂರ್ಯ ನೆತ್ತಿಯ ಮೇಲೆ ಬಿದ್ದಾಗ ಅವರ ನೆರಳು ಅವರಲ್ಲಿ ಇದ್ದಾಗ ಮಾತ್ರ ಅವರು ಬೇರೆ ಕಡೆ ನಡೆದಾಡುವ ಪರಿಸ್ಥಿತಿ ಇತ್ತು. ಆದರೆ ದೇಶಕ್ಕೆ ಸ್ವಾತಂತ್ರ ಬಂದ ನಂತರ ಡಾ. ಬಿಆರ್ ಅಂಬೇಡ್ಕರ್ ಅವರು ರಚಿಸಿದ ಸಂವಿಧಾನದಲ್ಲಿ ಎಲ್ಲರಿಗೂ ಸಮಾನವಾದ ಕಾನೂನು ಹಾಗೂ ಹಕ್ಕುಗಳನ್ನು ತಂದರು. ಇದರಿಂದ ವಿವಿಧ ಜಾತಿಯಿಂದ ಕೂಡಿದ ನಮ್ಮ ದೇಶದಲ್ಲಿ ಅಸ್ಪೃಶ್ಯತೆ ಇನ್ನೂ ಇರುವುದು ಖಂಡನೀಯ ಎಂದು ತಿಳಿಸಿದರು.

ಶ್ರೀರಾಪುರ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಲೋಕೇಶ್ ನಾಯಕ್ ಮಾತನಾಡಿ ಕಾನೂನಿನ ಮೂಲಕ ಅನಿಷ್ಠ ಪದ್ಧತಿಯನ್ನು ಹೋಗಲಾಡಿಸಲು ಸಾಧ್ಯ ಇದರಿಂದ ಪ್ರತಿಯೊಬ್ಬರು ಯಾವುದೇ ರೀತಿಯ ಜಾತಿ ಭೇದ ಭಾವ ಮಾಡದೆ ಸರ್ವರು ಸಮಾನರು ಎಂದು ಪ್ರೀತಿ ವಿಶ್ವಾಸದಿಂದ ಅರಿತು ಬಾಳಿದರೆ ಅಸ್ಪೃಶ್ಯತೆ ಹೋಗಲಾಡಿಸಲು ಸಾಧ್ಯ ಎಂದರು.

ಮಡಿಲುಸಂಸ್ಥೆಯಅಧ್ಯಕ್ಷಕುಮಾರಸ್ವಾಮಿ ಮಾತನಾಡಿ ಅಸಮಾನತೆಯಿಂದ ಕೂಡಿದ ಸಮಾಜವನ್ನು ಮುಖ್ಯ ವಾಹಿನಿಗೆ ತರಲು ಬುದ್ಧ, ಬಸವ, ಅಂಬೇಡ್ಕರ್ ಅನರೆಕ ಮಹಾನೀಯರು ಹೋರಾಟ ನಡೆಸಿದ್ದಾರೆ. ಆದರೂ ಸಹ ಗ್ರಾಮೀಣ ಭಾಗದಲ್ಲಿ ಅಸ್ಪೃಶ್ಯತೆ ಎಂಬುದು ಇನ್ನೂ ತಾಂಡವಾಡುತ್ತಿದೆ ಕೆಲವು ಗ್ರಾಮೀಣ ಭಾಗದಲ್ಲಿ ಈಗಲೂ ಸಹ ದಲಿತರಿಗೆ ಕ್ಷೌರ ಮಾಡಲು ನಿರಾಕರಣೆ ಮಾಡುತ್ತಿರುವ ಪ್ರಕರಣಗಳು ಮರುಕಳಿಸುತ್ತಲೇ ಇವೆ ಇದರಿಂದ ಪ್ರತಿಯೊಬ್ಬರು ಜಾತಿ ಭೇದ ಮರೆತು ಎಲ್ಲರೂ ಸಹ ಮನುಷ್ಯರೇ ಎಂದು ತಿಳಿದು ಬಾಳಬೇಕು ಎಂದರು.

ಸಮಾಜ ಕಲ್ಯಾಣ ಇಲಾಖೆ ನಿಲಯ ಪಾಲಕರಾದ ರಾಘವೇಂದ್ರ ಮಾತನಾಡಿ ಪ್ರಜಾಪ್ರಭುತ್ವದಲ್ಲಿ ಎಲ್ಲರೂ ಸಮಾನರೆ ಇಂದಿನ ಮಕ್ಕಳೇ ಮುಂದಿನ ಪ್ರಜೆಗಳು ಇದರಿಂದ ಪ್ರತಿಯೊಬ್ಬರೂ ಶಿಕ್ಷಣ ಪಡೆದು ವಿದ್ಯಾವಂತರಾದಾಗ ಮಾತ್ರ ಅಸ್ಪೃಶ್ಯತೆ ನಿವಾರಣೆ ಮಾಡಲು ಸಾಧ್ಯ ಅದರಿಂದ ಪ್ರತಿಯೊಬ್ಬ ಪೋಷಕರು ತಮ್ಮ ಮಕ್ಕಳಿಗೆ ಉಚಿತ ಹಾಗೂ ಕಡ್ಡಾಯ ಶಿಕ್ಷಣವನ್ನು ಕೊಡಿಸಬೇಕು ಹಾಗೂ ಮಕ್ಕಳ ವಿದ್ಯಾಭ್ಯಾಸಕ್ಕೆ ಸಮಾಜ ಕಲ್ಯಾಣ ಇಲಾಖೆಯಿಂದ ಉಚಿತ ವಸತಿ ನಿಲಯ ವ್ಯವಸ್ಥೆ ಇರುವುದರಿಂದ ಪ್ರತಿಯೊಬ್ಬರೂ ಸದುಪಯೋಗಪಡಿಸಿಕೊಳ್ಳಿ ಎಂದು ಹೇಳಿದರು.


ಪುಟ 2

## ಫಾಸ್ಟ್ ನ್ಯೂಸ್

### ಜಾತಿಯ ಎಲ್ಲೆಯನ್ನು ಮೀರಿ ಬದುಕಿ: ಗೋಪಾಲಪ್ಪ ಹೇಳಿಕೆ

» ಮೊದಲ ಪುಟದಿಂದ

ಯುವ ವಕೀಲರಾದ ಪ್ರತಾಪ್ ಮಾತನಾಡಿ ಕಾನೂನಿನ ಅಡಿಯಲ್ಲಿ ಸರ್ವರು ಸಮಾನರು ಯಾರಾದರೂ ಜಾತಿ ನಿಂದನೆ ಮಾಡಿದರೆ ಅಂತವರ ವಿರುದ್ಧ ವಿವಿಧ ರೀತಿಯ ಪ್ರಕರಣಗಳು ದಾಖಲಾಗುತ್ತದೆ. ಅದರಲ್ಲಿ ಅಟ್ರಾ ಸಿಟಿ ಕೇಸ್ ದಾಖಲಾದರೆ ಕಾನೂನಿನ ಅಡಿಯಲ್ಲಿ ಅವರು ಹೊರಬರದೆ ಜೈಲಿನೊಳಗೆ ಜೀವಾವಧಿ ಶಿಕ್ಷೆ ಅನುಭವಿಸಬೇಕಾಗುತ್ತದೆ. ಕಾನೂನನ್ನು ಅರಿತು ಬದುಕಬೇಕು ಕಾನೂನಿಗಿಂತ ದೊಡ್ಡವರು ಯಾರು ಇಲ್ಲ ಎಂದು ತಿಳಿಸಿದರು.ಕೇಲ್ಲೋಡು ಗ್ರಾಮದಲ್ಲಿ ನಡೆದ ಅಸ್ಪೃಶ್ಯತಾ ನಿವಾರಣ ಕಾರ್ಯಕ್ರಮದಲ್ಲಿ 85 ವರ್ಷದ ಪಾರ್ವತಮ್ಮ ಎಂಬ ವೃದ್ಧ ಮಹಿಳೆ ಭಾಗವಹಿಸಿ ಕಾರ್ಯಕ್ರಮ ಮುಗಿಯುವವರೆಗೂ ಕಾರ್ಯಕ್ರಮವನ್ನು ವೀಕ್ಷಣೆ ಮಾಡಿರುವುದು ಎಲ್ಲರ ಗಮನ ಸೆಳೆಯಿತು, ಈ ಒಂದು ಸಂದರ್ಭದಲ್ಲಿ ಶ್ರೀರಾಪುರ ಹಾಗೂ ಕೆಲ್ಲೋಡು ಗ್ರಾಮ ಪಂಚಾಯಿತಿ ಅಧಿಕಾರಿಗಳಾದ ಮೂಡಗಿರಿಯಪ್ಪ, ರಾಘವೇಂದ್ರ ಡಿಎ□□□ಸ್ ಸಂಘಟನೆಯ ಮುಖಂಡ ಸೋಮಶೇಖರ್, ಸಮಾಜ ಕಲ್ಯಾಣ ಇಲಾಖೆ ನಿಲಯ ಪಾಲಕರಾದ ಬಾಬು ಬಿ.ಸಿ, ಮೂಡಲ ಗಿರಿಯಪ್ಪ, ಕೇಲ್ಲೋಡು ಗ್ರಾ.ಪಂ.ಅಧ್ಯಕ್ಷೆ ಶಿಲ್ಪ ಮಧುಸೂದನ್, ಶಿಕ್ಷಕಿ ಕಲಾವತಿ, ಮಡಿಲು ಸಂಸ್ಥೆಯ ಖಜಾಂಚಿ ಪ್ರದೀಪ್, ಸಂಘಟನಾ ಕಾರ್ಯದರ್ಶಿ ದರ್ಶನ್, ನಿರ್ದೇಶಕರಾದ ದ್ಯಾಮ ಕುಮಾರ್ ,ಪ್ರವೀಣ್ ಕುಮಾರ್ ಹಾಗೂ ಗ್ರಾಮಸ್ಥರು ಮತ್ತು ಶಾಲಾ ವಿದ್ಯಾರ್ಥಿಗಳು ಉಪಸ್ಥಿತರಿದ್ದರು

### ವ್ಯಕ್ತಿ ಕಾಣೆ ಪತ್ತೆಗೆ ಮನವಿ

» ಚಿತ್ರದುರ್ಗ

ನಗರದ ಐ.ಯು.ಡಿ.ಪಿ ಲೇಔಟ್‌ನ ನಿವಾಸಿ ಕೆ.ಅರುಣ್ ಕುಮಾರ್ (ಸು.43 ವರ್ಷ) ಕಾಣೆಯಾದ ಕುರಿತು ಅಕ್ಟೋಬರ್ 29ರಂದು ಬಡಾವಣೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಕಾಣೆಯಾದ ಅರುಣ್ ಕುಮಾರ್ ಸು.170 ಸೆ.ಮೀ ಎತ್ತರ, ಕೋಲು ಮುಖ, ಗೋಧಿ ಬಣ್ಣ, ಸಾಧಾರಣ ಮೈಕಟ್ಟು ಹೊಂದಿದ್ದು, ಕನ್ನಡ ಮತ್ತು ತೆಲುಗು ಭಾಷೆ ಮಾತನಾಡುವರು. ಮನೆಯಿಂದ ಹೋಗುವಾಗ ಸಿಮೆಂಟ್ ಕಲರ್ ಜರ್ಕಿನ್, ಸಿಮೆಂಟ್ ಕಲರ್ ಪ್ಯಾಂಟ್ ಧರಿಸಿದ್ದರು. ಈ ಮೇಲ್ಕಂಡ ವ್ಯಕ್ತಿಯ ಬಗ್ಗೆ ಮಾಹಿತಿ ಕಂಡು ಬಂದಲ್ಲಿ ಬಡಾವಣೆ ಪೊಲೀಸ್ ಠಾಣೆ ದೂರವಾಣಿ ಸಂಖ್ಯೆ 9480803149, ವೃತ್ತ ನಿರೀಕ್ಷಕರ ದೂರವಾಣಿ ಸಂಖ್ಯೆ 08194223295 ಗೆ ಅಥವಾ ಪೊಲೀಸ್ ನಿಯಂತ್ರಣ ಕೋಣೆಗೆ ಸಂಪರ್ಕಿಸಬಹುದು ಪ್ರಕಟಣೆ ತಿಳಿಸಿದೆ.

### ಹೊಸದುರ್ಗ ವೀರಶೈವ ಘಟಕದಿಂದ ನೂತನ ಅಧ್ಯಕ್ಷರಿಗೆ ಸನ್ಮಾನ

» ಹೊಸದುರ್ಗ

ತಾಲ್ಲೂಕು ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾದ ಘಟಕದ ವತಿಯಿಂದ ರಾಷ್ಟ್ರೀಯ ಅಧ್ಯಕ್ಷ ಶಾಮನೂರು ಶಿವಶಂಕರಪ್ಪ ಹಾಗೂ ರಾಜ್ಯಾಧ್ಯಕ್ಷ ಶಂಕರ್ ಮಹಾದೇವ ಬಿದರಿ ಅವರಿಗೆ ಅಭಿನಂದನೆ ಹಾಗೂ ನೂತನ ಪದಾಧಿಕಾರಿಗಳ ಪದಗ್ರಹಣ ಸಮಾರಂಭ ನ. 15 ರ ಶುಕ್ರವಾರ (ಇಂದು) ಬೆಳಿಗ್ಗೆ 11 ಕ್ಕೆ ಪಟ್ಟಣದ ಸಿದ್ಧರಾಮೇಶ್ವರ ಸಮುದಾಯ ಭವನದಲ್ಲಿ ನಡೆಯಲಿದೆ ಎಂದು ತಾಲ್ಲೂಕು ಅಧ್ಯಕ್ಷ ಎಸ್. ಮಂಜುನಾಥ್ ತಿಳಿಸಿದರು. ಪಟ್ಟಣದ ಎಸ್. ಮಂಜುನಾಥ್ ಅವರ ಕಚೇರಿಯಲ್ಲಿ ಆಯೋಜಿಸಿದ್ದ ಪೂರ್ವಸಿದ್ಧತಾ ಸಭೆಯಲ್ಲಿ ಭಾಗವಹಿಸಿ, ಮಾತನಾಡಿದರು.

ಬೆಳ್ಳಿಗ್ಗೆ 10 ಗಂಟೆಗೆ ಪಟ್ಟಣದ ಬಸವ ವೃತ್ತದಲ್ಲಿರುವ ಬಸವ ಪುತ್ಥಳಿಗೆ ಮಾಲಾರ್ಪಣೆ ಮಾಡಿ, ಬೈಕ್ ರ್ಯಾಲಿ ಮೂಲಕ ಸಿದ್ಧರಾಮೇಶ್ವರ ಸಮುದಾಯ ಭವನಕ್ಕೆ ತೆರೆಯಲಾಗುವುದು. ಕಾರ್ಯಕ್ರಮವನ್ನೂ ಶಾಮನೂರು ಶಿವಶಂಕರಪ್ಪ ಉದ್ಘಾಟಿಸುವರು. ತಾಲ್ಲೂಕು ಘಟಕದ ಅಧ್ಯಕ್ಷ ಎಸ್. ಮಂಜುನಾಥ್ ಅಧ್ಯಕ್ಷತೆ ವಹಿಸುವರು. ಶಾಸಕರುಗಳಾದ ಬಿ.ಜಿ. ಗೋವಿಂದಪ್ಪ, ಕೆ.ಸಿ. ವೀರೇಂದ್ರ ಪಪ್ಪಿ, ವಿಧಾನ ಪರಿಷತ್ ಸದಸ್ಯ ಕೆ.ಎಸ್. ನವೀನ್, ಸೀತಾರಾಘವ ಸೌಹಾರ್ದ ಸಹಕಾರ ಬ್ಯಾಂಕ್ ಅಧ್ಯಕ್ಷ ಹಂಜಿ ಶಿವಸ್ವಾಮಿ, ಡಿ.ಸಿ.ಸಿ. ಬ್ಯಾಂಕ್ ಉಪಾಧ್ಯಕ್ಷ ಹೆಚ್.ಬಿ. ಮಂಜುನಾಥ್, ಮುಖಂಡರುಗಳಾದ ಟಿ.ಹೆಚ್. ಬಸವರಾಜಪ್ಪ, ಎಸ್. ಲಿಂಗಮೂರ್ತಿ, ಹನುಮಲಿ ಷಣ್ಮುಖಪ್ಪ ಸೇರಿದಂತೆ ಹಲವರು ಭಾಗವಹಿಸುವರು.

### ವಾಯುಮಾಲಿನ್ಯ ದುಷ್ಪರಿಣಾಮ: ಜಾಗೃತಿ

» ಮೊದಲ ಪುಟದಿಂದ

ಜಿಲ್ಲಾಧಿಕಾರಿಗಳ ಆದೇಶದನ್ವಯ ಶಾಲಾ ವಾಹನಗಳ ವಿವರ, ಸಿಬ್ಬಂದಿಗಳ ವಿವರ ಹಾಗೂ ಖಾಸಗಿ ಶಾಲಾ ವಾಹನಗಳಲ್ಲಿ ಮಹಿಳಾ ಸಹಾಯಕಿಯರನ್ನು ನಿಯೋಜಿಸಿರುವ ಕುರಿತು ಮಾಹಿತಿ ನೀಡಬೇಕು. ಖಾಸಗಿ ಶಾಲೆಗಳಲ್ಲಿರುವ ವಾಹನಗಳಿಗೆ ಸಂಬಂಧಪಟ್ಟಂತೆ ಖಾಸಗಿ ಶಾಲೆಗಳ 'ಲ್ಲಿ ಶಾಲಾ ವಾಹನಗಳು ನೋಂದಣಿಯಾಗಿ 15 ವರ್ಷ ಮೀರಿದ ವಾಹನಗಳ ಕಾರ್ಯಾಚರಣೆ ಮಾಡುವಂತಿಲ್ಲ ಎಂದು ಮಾಹಿತಿ ನೀಡಿದರು.

18ವರ್ಷವಯೋಮಾನದಒಳಗಿರುವವಿದ್ಯಾರ್ಥಿ, ವಿದ್ಯಾರ್ಥಿನಿಯರಿಗೆ ದ್ವಿಚಕ್ರ ವಾಹನಗಳನ್ನು ಚಾಲನೆ ಮಾಡಲು ನಿರ್ಬಂಧಿಸುವುದು ಹಾಗೂ ನೀಡುವುದು ದಂಡನಾರ್ಹ ಅಪರಾಧವಾಗಿದೆ ಎಂದು ತಿಳಿಸಿದರು.


# ಅರ್ಹರಿಗೆ ಗ್ಯಾರಂಟಿ ಯೋಜನೆ ತಲುಪಿಸಿ

» ಚಿತ್ರದುರ್ಗ

ಗ್ಯಾರಂಟಿ ಯೋಜನೆಗಳಿಂದ ಹೊರಗುಳಿದ ಅರ್ಹ ಫಲಾನುಭವಿಗಳನ್ನು ಗುರುತಿಸಿ ಯೋಜನೆಗಳ ಲಾಭ ತಲುಪಿಸಲು ಪ್ರಯತ್ನಿಸುವಂತೆ ಗ್ಯಾರಂಟಿ ಯೋಜನೆಗಳ ತಾಲ್ಲೂಕು ಸಮಿತಿಯ ಪದಾಧಿಕಾರಿಗಳಿಗೆ ಶಾಸಕರಾದ ಕೆ.ಸಿ.ವಿರೇಂದ್ರ ಪಪ್ಪಿ ಸೂಚನೆ ನೀಡಿದರು.

ನಗರದ ತಾಲ್ಲೂಕು ಪಂಚಾಯತ್ ಕಚೇರಿಯಲ್ಲಿ ಬುಧವಾರ ಸಂಜೆ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಚಿತ್ರದುರ್ಗ ತಾಲ್ಲೂಕು ನೂತನ ಕಚೇರಿಯನ್ನು ಉದ್ಘಾಟಿಸಿ ದೇವರಿಗೆ ಪೂಜೆ ಸಲ್ಲಿಸಿ ಮಾತನಾಡಿದ ಶಾಸಕರು. ಬಡ ಜನರ ಏಳಿಗೆಗಾಗಿ ರಾಜ್ಯ ಸರ್ಕಾರ ರೂಪಿಸಿರುವ ಮಹತ್ವಾಕಾಂಕ್ಷೆ ಪಂಚ ಗ್ಯಾರಂಟಿ ಯೋಜನೆಗಳು ಸಮಾಜದ ಎಲ್ಲ ಅರ್ಹ ಫಲಾನುಭವಿಗಳಿಗೆ ದೊರಕಬೇಕು. ಯೋಜನೆಗಳ ಅನುಷ್ಠಾನಕ್ಕೆ ಸರ್ಕಾರ ಸಾವಿರಾರು ಕೋಟಿ ರೂಪಾಯಿಗಳನ್ನು ಖರ್ಚು ಮಾಡುತ್ತಿದೆ. ಈ ಕುರಿತು ಸಾರ್ವಜನಿಕರಿಗೆ ಹೆಚ್ಚಿನ ಮಾಹಿತಿ ದೊರಕುವಂತಾಗಬೇಕು ಎಂದರು.

ಸರ್ಕಾರ ಈ ಐದು ಯೋಜನೆಯಿಂದ ಯಾವ ಅರ್ಹ ಫಲಾನುಭವಿಗಳು ಸಹಾ ಹೊರಗೆ ಉಳಿಯದಂತೆ ನೋಡಿಕೊಳ್ಳಬೇಕಿದೆ. ಸರ್ಕಾರ ಜನತೆ ಆರ್ಥಿಕವಾಗಿ ಸಬಲರಾಗಲಿ ಎಂದು ಈ ರೀತಿಯ ಯೋಜನೆಗಳನ್ನು ಜಾರಿ ಮಾಡಿದೆ ಈ ಯೋಜನೆಯಬ ಪದಾಧಿಕಾರಿಗಳು ಇದರ ಬಗ್ಗೆ ಜನರಿಗೆ ಅರಿವೂ ಮೂಡಿಸಿ



ಅದರ ಲಾಭವನ್ನು ಪಡೆಯಲು ಮುಂದಾಗುವಂತೆ ಸೂಚಿಸಬೇಕೆಂದು ಪದಾಧಿಕಾರಿಗಳಲ್ಲಿ ಮನವಿ ಮಾಡಿ ಇದರ ಬಗ್ಗೆ ನಗರ ಮತ್ತು ಗ್ರಾಮಾಂತರ ಪ್ರದೇಶಗಳಲ್ಲಿ ಆವಕಾಶ ವಂಚಿತರನ್ನು ಗುರುತಿಸಿ ಅವರಿಗೆ ಈ ಸೌಲಭ್ಯ ಸಿಗುವಂತೆ ಮಾಡಿ, ಸಮಿತಿಗೆ ನನ್ನಿಂದ ಎಲ್ಲಾ ರೀತಿಯ ಸಹಕಾರ ಸಿಗಲಿದೆ ಎಂದರು.

ಗ್ಯಾರಂಟಿಯೋಜನೆಗಳಜಿಲ್ಲಾಅನುಷ್ಠಾನ ಸಮಿತಿ ಅಧ್ಯಕ್ಷ ಶಿವಣ್ಣ ಮಾತನಾಡಿ, ತಾಲ್ಲೂಕು ಮಟ್ಟದ ಪದಾಧಿಖಾರಿಗಳು ನಗರ ಮತ್ತು ಗ್ರಾಮಾಂತರ ಪ್ರದೇಶಗಳಲ್ಲಿ ಸಂಚಾರ ಮಾಡುವುದರ ಮಲಕ ಈ ಯೋಜನೆಯಿಂದ ಹೊರಗೆ ಉಳಿದವರನ್ನು ಗುರುತಿಸಿ ಅವರಿಗೆ ಈ ಯೋಜನೆ ಸಿಗುವಂತೆ ಮಾಡಬೇಕಿದೆ. ಇದ್ದಲ್ಲದೆ ನಗರದಲ್ಲಿ ಎರಡು ವಾರ್ಡ ಗ್ರಾಮಾಂತರ ಪ್ರದೇಶಗಳಲ್ಲಿ ಮೂರು ಪಂಚಾಯಿತಿಗಳಲ್ಲಿ ಅಧಿಕಾರಿಗಳೊಂದಿಗೆ ಸಭೆಯನ್ನು ನಡೆಸುವುದರ ಮೂಲಕ ಈ ಯೋಜನೆಯ ಫಲವನ್ನು ಪಡೆಯುತ್ತಿರುವವರಿಂದ ಅನಿಸಿಕೆ, ಹಾಗೂ ಯಾರಿಗೆ ಸಿಕ್ಕಿಲ್ಲ ಯಾಕೆ ಸಿಕ್ಕಿಲ್ಲ ಎಂಬ ಮಾಹಿತಿಯನ್ನು ಪಡೆಯಬೇಕು ಇದ್ದಲ್ಲದೆ ಅಧಿಕಾರಿಗಳು ಹಾಗೂ ಫಲಾನುಭವಿಗಳ ಮಧ್ಯೆ ಸಂವಾದವನ್ನು ನಡೆಸುವಂತೆ ಕರೆ ನೀಡಿದರು.ಗೃಹಲಕ್ಷ್ಮೀ ಹಾಗೂ ಅನ್ನಭಾಗ್ಯ ಯೋಜನೆಗಳ ಮೂಲಕ ಫಲಾನುಭವಿಗಳ ಬ್ಯಾಂಕ್ ಖಾತೆಗೆ ನೇರವಾಗಿ ಹಣ ವರ್ಗಾವಣೆ ಮಾಡಲಾಗುತ್ತಿದೆ. ಈ ಯೋಜನೆಗಳ ಅಡಿ ಪ್ರತಿ ತಿಂಗಳು ಫಲಾನುಭವಿಗಳ ಖಾತೆಗೆ ಜಮೆ ಮಾಡಿದ ಹಣ, ಫಲಾನುಭವಿಗಳ ಸಂಖ್ಯೆಗಳ ಸಂಕ್ಷಿಪ್ತ ಪ್ರಗತಿ ವಿವರನ್ನು ಎಲ್ಲ ಅಂಗನವಾಡಿ ಹಾಗೂ ನ್ಯಾಯಬೆಲೆ ಅಂಗಡಿಗಳ ಮುಂದಿನ ಫಲಕಗಳಲ್ಲಿ ಬರೆದು ಪ್ರದರ್ಶಿಸಬೇಕು. ಗೃಹಜ್ಯೋತಿ ಯೋಜನೆ ಫಲಾನುಭವಿಗಳ ವಿವರ ಹಾಗೂ ಯೋಜನೆಯಡಿ ಇದರವರೆಗೂ ಸರ್ಕಾರದಿಂದ ಭರಿಸಿರುವ ಒಟ್ಟು ಮೊತ್ತದ ವಿವರಗಳನ್ನು ಪ್ರತಿ ಬೆಸ್ಕಾಂ ಕಚೇರಿಗಳ ಸೂಚನಾ ಫಲಕಗಳಲ್ಲಿ ಸಾರ್ವಜನಿಕರಿಗೆ ಕಾಣುವಂತೆ ಪ್ರಕಟಿಸಬೇಕು. ಇದರೊಂದಿಗೆ ಬೆಸ್ಕಾಂ ಮಾಹಿತಿ ಶಿಕ್ಷಣ ಕಾರ್ಯಕ್ರಮಗಳಲ್ಲಿ ಕೂಡ ಯೋಜನೆ ಕುರಿತು ಸಾರ್ವಜನಿಕರಿಗೆ ಮಾಹಿತಿ ನೀಡಬೇಕು. ಯುವನಿಧಿ ಯೋಜನೆಯು ಜಿಲ್ಲೆಯಲ್ಲಿ ಇನ್ನಷ್ಟು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು, ಜಿಲ್ಲೆಯ ಎಲ್ಲಾ ಪದವಿ ಹಾಗೂ ಡಿಪ್ಲೋಮೋ ಕಾಲೇಜುಗಳಲ್ಲಿ ಜಾಗೃತಿ ಆಂದೋಲನ ಏರ್ಪಡಿಸಬೇಕು. ಹೆಚ್ಚು ಯುವಕರು ಯುವನಿಧಿಯ ಸೌಲಭ್ಯ ಪಡೆದುಕೊಳ್ಳುವಂತೆ ಪ್ರೇರೇಪಿಸಬೇಕು ಎಂದು ಜಿಲ್ಲಾ ಅನುಷ್ಠಾನ ಸಮಿತಿ ಅಧ್ಯಕ್ಷ ಶಿವಣ್ಣ ಹೇಳಿದರು.ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಚಿತ್ರದುರ್ಗ ತಾಲ್ಲೂಕು ಘಟಕದ ವತಿಯಿಂದ ಶಾಸಕ ಕೆ.ಸಿ. ವೀರೇಂದ್ರ ಪಪ್ಪಿರನ್ನು ಸನ್ಮಾನಿಸಲಾಯಿತು.ಈ ಸಂದರ್ಭದಲ್ಲಿ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷರೂ ಹಾಗೂ ಚಿತ್ರದುರ್ಗ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಎಮ್ ಕೆ ತಾಜ್‌ಪೀರ್, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಉಪಾಧ್ಯಕ್ಷರಾದ ಡಿ.ಎನ್.ಮೈಲಾರಪ್ಪ, ಮುದಸಿರ್ ನವಾಜ್, ಕುಮಾರಸ್ವಾಮಿ, ರಮೇಶ್, ಆಸೋಕ್ ನಾಯ್ಡ್, ಸಾಧಿಕ್, ದಿನೇಶ್, ಮಂಜುನಾಥ್, ಹನೀಫ್, ಪ್ರಕಾಶ್ ನಾಯ್ಕ್, ವಿನಯಕುಮಾರ್ ಸೇರಿದಂತೆ ಇತರರು ಭಾಗವಹಿಸಿದ್ದರು.

## ಶಾಲೆ ಅಭಿವೃದ್ಧಿಗೆ ವಿದ್ಯಾರ್ಥಿಗಳು ಪಣ: ಶ್ಲಾಘನೀಯ

» ಚಿತ್ರದುರ್ಗ/ಹಿರಿಯೂರು, (ಐಮಂಗಲ)

ಸಾವಿರಾರು ವಿದ್ಯಾರ್ಥಿಗಳಿಗೆ ವಿದ್ಯಾದಾನ ಮಾಡಿ ಅವರ ಭವಿಷ್ಯಕ್ಕೆ ದಾರಿ ಮಾಡಿಕೊಟ್ಟ ಶಾಲೆಯ ಅಭಿವೃದ್ಧಿಗೆ ಹಿರಿಯ ವಿದ್ಯಾರ್ಥಿಗಳು ಸಂಘಟಿತರಾಗಿರುವುದು ಶ್ಲಾಘನೀಯ ಎಂದು ಚಿತ್ರದುರ್ಗ ಶ್ರೀಜಗದ್ಗುರು ಮುರುಘರಾಜೇಂದ್ರ ಬೃಹನ್ಮಠ ಹಾಗೂ ಎಸ್.ಜೆ.ಎಂ. ವಿದ್ಯಾಪೀಠದ ಆಡಳಿತ ಮಂಡಳಿಯ ಸದಸ್ಯರಾದ ಡಾ.ಬಸವಕುಮಾರ ಸ್ವಾಮೀಜಿ ಹೇಳಿದರು.

ಅವರು ಗ್ರಾಮದ ಹೊರವಲಯದಲ್ಲಿರುವ ಎಸ್ ಜೆ ಎಂ ವಿದ್ಯಾಪೀಠದ ಆಶ್ರಯದಲ್ಲಿ ನಡೆಯುತ್ತಿರುವ ಎಸ್‌ವಿಎಸ್ ಪ್ರೌಢಶಾಲೆಯ ಆವರಣದಲ್ಲಿ ಗುರುವಾರ ಹಿರಿಯ ವಿದ್ಯಾರ್ಥಿಗಳ ಸಂಘದ ವತಿಯಿಂದ ನೂತನ ಕಟ್ಟಡ ನಿರ್ಮಾಣ ಕಾರ್ಯಕ್ಕೆ ಭೂಮಿ ಪೂಜೆ ನೆರವೇರಿಸಿ ಮಾತನಾಡಿದ ಅವರು,ಶಾಲೆಯ ಅಗತ್ಯಗಳಿಗೆ ಸರ್ಕಾರ ಹಾಗೂ ಇತರರನ್ನು ಅವಲಂಭಿಸದೆಗ್ರಾಮಗಳಲ್ಲಿಹಿರಿಯ



ವಿದ್ಯಾರ್ಥಿಗಳು ಒಂದಾಗಿ ತಾವು ವಿದ್ಯಾಭ್ಯಾಸ ಮಾಡಿದ ಶಾಲೆಯ ಅಭಿವೃದ್ಧಿಗೆ ಮುಂದಾಗುವುದು ಉತ್ತಮ.ಶಾಲೆಯ ಏಳಿಗೆಯಿಂದ ವಿದ್ಯಾರ್ಥಿಗಳ ವಿದ್ಯಾಭ್ಯಾಸಕ್ಕೆ ಅನುಕೂಲವಾಗಲಿದೆ ಎಂದರು.

ನೂತನವಾಗಿ ಮೂರು ಕೊಠಡಿಗಳ ನಿರ್ಮಾಣಕ್ಕೆ ಈ ದಿನ ಭೂಮಿ ಪೂಜೆ ನೆರವೇರಿಸಲಾಗಿದ್ದು, ಈ ಕಾರ್ಯಕ್ಕೆ ಮಠದ ವತಿಯಿಂದಲೂ ಸಹಕಾರ ನೀಡಲಾಗುವುದು.ಹಿಡಿದಿರುವ ಸಾಮಾಜಿಕ ಮತ್ತು ಉಪಕಾರ ಎನ್ನುವ ಈ ಕೆಲಸವನ್ನು ನಿಲ್ಲಿಸದೇ ಮುಂದುವರೆಸಿರಿ, ವಿದ್ಯಾಧಾನಕ್ಕಿಂತ ಶ್ರೇಷ್ಠವಾದದ್ದು ಬೇರಿಲ್ಲ. ಈ ಶಾಲೆಯು ಮುಂದಿನ ದಿನಗಳಲ್ಲಿ ಇನ್ನು ಹೆಚ್ಚಿನ ವಿದ್ಯಾರ್ಥಿಗಳಿಗೆ ಉತ್ತಮ ಜ್ಞಾನಾರ್ಜನೆಗೆ ಸಹಕಾರಿಯಾಗಲಿ ಎಂದು ಆಶಿಸಿದರು.

ಈ ವೇಳೆ ಮುಖ್ಯಶಿಕ್ಷಕ ಎಸ್.ಎ.ಅಶೋಕ, ಹಿರಿಯ ವಿದ್ಯಾರ್ಥಿ ಸಂಘದ ಬಿ.ಕೆ.ಶಿವಶಂಕರಪ್ಪ, ಕೆ.ಎಂ. ಓಂಕಾರಪ್ಪ,ಟಿ.ಎಲ್.ಬಸವರಾಜಪ್ಪ, ಎಂ.ಮೂರ್ಕಣಪ್ಪ, ಎಸ್. ಗುರುಸಿದ್ದಪ್ಪ, ಸಿ.ರಾಧಾಕೃಷ್ಣ, ಓಂಕಾರಮ್ಮ, ಕವಿತಾ, ಅರವಿಂದ, ಓಂಕಾರಯ್ಯ, ಇಂಜಿನಿಯರ್ ಸಿದ್ದಪ್ಪ, ಸಹಶಿಕ್ಷಕರಾದ ಟಿ.ರಮೇಶ್, ಶಿವಮೂರ್ತಿ, ಅಥಿತಿ ಶಿಕ್ಷಕರಾದ ಎಲ್.ಆರ್.ಕಾರ್ತಿಕ್, ಎಸ್.ಆರ್. ರಮ್ಯಶ್ರೀ, ಓಸುಧಾ, ಸಿಬ್ಬಂದಿ ಡಿ.ಮಲ್ಲಿಕಾರ್ಜುನ, ಶಾರದಮ್ಮ ಹಾಗೂ ವಿದ್ಯಾರ್ಥಿಗಳಿದ್ದರು.

## ಜ.12 ರಿಂದ ಬಾಗಲಕೋಟೆಯ ಕೂಡಲಸಂಗಮದಲ್ಲಿ ಶರಣ ಮೇಳ

» ಮೊದಲ ಪುಟದಿಂದ

ಇದು ಲಿಂ॥ ಲಿಂಗಾನಂದಾ ಮಹಾಸ್ವಾಮಿಗಳ ಹಾಗೂ ಲಿಂ॥ ಮಾತೆ ಮಹಾದೇವಿಯವರ ಸತ್‌ಸಂಕಲ್ಪದ ಕೂಸಾದಾ ಶರಣ ಮೇಳವು 1988ರಿಂದ ಇಲ್ಲಿಯವರೆಗೆ 37 ಸಂವತ್ಸರಗಳನ್ನು ಪೂರೈಸಿದೆ. 2025 ಜನವರಿ 12,13 ಹಾಗೂ 14 ರಂದು ಕೂಡಲಸಂಗಮ ಸುಕ್ಷೇತ್ರದಲ್ಲಿ ನಡೆಯುವ ಶರಣಮೇಳವು 38 ನೇ ಶರಣಮೇಳವಾಗಿದೆ ಎಂದರು.

ಮುಸಲ್ಮಾನ್ ಧರ್ಮಿಯರಿಗೆ ಮಕ್ಕಾ, ಸಿಖ್ಖರಿಗೆ ಅಮೃತಸರ್, ಬೌದ್ದರಿಗೆ ಬುದ್ದಗಯ ಧರ್ಮ ಕ್ಷೇತ್ರಗಳಿರುವಂತೆ ಲಿಂಗಾಯತ ಧರ್ಮಾನುಯಾಯಿಗಳಿಗೆ ವಿಶ್ವಗುರು ಬಸವಣ್ಣನವರ ಐಕ್ಯಸ್ಥಾನವಾದ ಕೂಡಲಸಂಗಮವೇ ಧರ್ಮಕ್ಷೇತ್ರವಾಗಿದೆ. ಈ 38ನೇ ಶರಣಮೇಳಕ್ಕೆ ನಾಡಿನ ಎಲ್ಲಾ ಜನತೆ ಭಾಗವಹಿಸುವುದರ ಮೂಲಕ ಯಶಸ್ವಿ ಮಾಡಬೇಕಿದೆ. ಈ ಸಮಯದಲ್ಲಿ ಸಮುದಾಯ ಪ್ರಾರ್ಥನೆ, ಇಷ್ಟಲಿಂಗ ಪೂಜೆ, ಉಪನ್ಯಾಸ, ಧಾರ್ಮಿಕ ರಸಪ್ರಶ್ನೆ, ಲಿಂಗಾಂಗಯೋಗಿ ಅಷ್ಠಾಂಗ ಯೋಗ, ಧರ್ಮ ಚಿಂತನೆ, ಗೋಷ್ಟಿಗಳು ಮಹಿಳಾ ಗೋಷ್ಠಿಗಳು, ಕೃಷಿ ಚಿಂತನಗೋಷ್ಟಿ,ಧರ್ಮಗುರುಬಸವಣ್ಣರವರಭಾವಚಿತ್ರದೊಂದಿಗೆವಚನ ಸಾಹಿತ್ಯದ ಮೆರವಣಿಗೆ ಸೇರಿದಂತೆ ವಿವಿಧ ರೀತಿಯ ಕಾರ್ಯಕ್ರಮಗಳು ನಡೆಯಲಿವೆ ಎಂದರು.ಗೋಷ್ಠಿಯಲ್ಲಿ ಉಳವಿಯ ನಾಗಲಾಂಬೀಕ ಪೀಠ ಮತ್ತು ಚಿತ್ರದುರ್ಗದ ಬಸವ ಮಂಟಪದ ಪೀಠಾಧ್ಯಕ್ಷರಾದ ದಾನೇಶ್ವರಿ ಮಾತಾಜಿ, ಬೆಂಗಳೂರಿನ ಕುಂಬಳಗೋಡಿನ ಬಸವಗಂಗೋತ್ರಿ ಆಶ್ರಮದ ಪೀಠಾಧ್ಯಕ್ಷರಾದ ಸದ್ಗುರು ಬಸವಯೋಗಿ ಮಹಾಸ್ವಾಮಿ, ರಾಷ್ಟ್ರೀಯ ಬಸವದಳದ ಕೇಂದ್ರ ಸಮಿತಿಯ ಪ್ರಧಾನ ಕಾರ್ಯದರ್ಶಿ ಚಂದ್ರಮೌಳಿ, ಜಿಲ್ಲಾಧ್ಯಕ್ಷರಾದ ಜೆ.ಸಿ.ಮನೋಹರ್, ಕೋಶಾಧ್ಯಕ್ಷರಾದ ಶಂಕರಪ್ಪ, ಪ್ರಧಾನ ಕಾರ್ಯದರ್ಶಿ ಅಕ್ಕಮಹಾದೇವಿ ತಿಪ್ಪೇಸ್ವಾಮಿ, ಈರಮ್ಮ ನಾಗರಾಜ್ ಸೇರಿದಂತೆ ಇತರರು ಭಾಗವಹಿಸಿದ್ದರು.

## ರಾಷ್ಟ್ರೀಯ ಗ್ರಂಥಾಲಯ ಸಪ್ತಾಹ: ಪುಸ್ತಕ ಪ್ರದರ್ಶನಕ್ಕೆ ಚಾಲನೆ

» ಚಿತ್ರದುರ್ಗ

ರಾಷ್ಟ್ರೀಯ ಗ್ರಂಥಾಲಯ ಸಪ್ತಾಹದ ಅಂಗವಾಗಿ ಸಾರ್ವಜನಿಕ ಗ್ರಂಥಾಲಯ ಇಲಾಖೆ ಆಯೋಜಿಸಿರುವ ಪುಸ್ತಕ ಪ್ರದರ್ಶನಕ್ಕೆ ಸಾಹಿತಿ ಆನಂದ್ ಕುಮಾರ್ ಚಾಲನೆ ನೀಡಿದರು.ನಗರದ ಶ್ರೀ ಕೃಷ್ಣ ರಾಜೇಂದ್ರ ನಗರ ಕೇಂದ್ರ ಗ್ರಂಥಾಲಯದಲ್ಲಿ ಭಾರತದ ಗ್ರಂಥಾಲಯ ಪಿತಾಮಹ ಡಾ.ಎಸ್.ಆರ್. ರಂಗನಾಥ್ ಹಾಗೂ ಮಕ್ಕಳ ದಿನಾಚರಣೆ ಅಂಗವಾಗಿ ನೆಹರೂ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸುವ ಮೂಲಕ ಪುಸ್ತಕ ಪ್ರದರ್ಶನ ಉದ್ಘಾಟಿಸಿದರು. ನಂತರ ಮಾತನಾಡಿದ ಸಾಹಿತಿ ಆನಂದ ಕುಮಾರ್, ಮುದ್ರಣ ಮಾಧ್ಯಮ ಬಂದ ಮೇಲೆ ಪುಸ್ತಕಗಳು ಜನಸಾಮಾನ್ಯರಿಗೆ ತಲುಪುವಲ್ಲಿ ಗ್ರಂಥಾಲಯದ ಪಾತ್ರ ಬಹುಮುಖ್ಯವಾಗಿದೆ. ಪುಸ್ತಕದ ಸಾಂಗತ್ಯ ಇರುವವರು ಅಭಿವೃದ್ಧಿಯಾಗುವುದರಲ್ಲಿ ಸಂದೇಹವಿಲ್ಲ ಎಂದು ತಿಳಿಸಿದರು. ತಾಲ್ಲೂಕು ಪಂಚಾಯತ್ ನಿವೃತ್ತ ಅಧೀಕ್ಷಕ ಹನುಮಂತ್ ರಾಯ್ ಮಾತನಾಡಿ, ಪುಸ್ತಕಗಳ ಮಹತ್ವ ಮತ್ತು ಕುವೆಂಪು, ಡಾ.ಬಿ.ಆರ್. ಅಂಬೇಡ್ಕರ್ ಅವರ ಕುರಿತು ವಿದ್ಯಾರ್ಥಿಗಳಿಗೆ ತಿಳಿಸಿದರು.

ಪರಿಸರವಾದಿ ಡಾ.ಹೆಚ್‌ಕೆಎಸ್ ಸ್ವಾಮಿ ಮಾತನಾಡಿ, ವಿದ್ಯಾರ್ಥಿಗಳು ತಮ್ಮ ಜೀವನದಲ್ಲಿ ಕಷ್ಟಪಟ್ಟು ನಿರಂತರ ಅಧ್ಯಯನ ಮಾಡಬೇಕು. ವಿದ್ಯಾರ್ಥಿಗಳು ಸರಳತೆ ಮೈಗೂಡಿಸಿಕೊಳ್ಳುವಂತೆ ಸಲಹೆ ನೀಡಿದರು.



## ಪ್ರಮುಖ ಸುದ್ದಿ

# ಮಧುಮೇಹ ಮುಕ್ತ ಗ್ರಾಮ ನಿರ್ಮಿಸಿ: ಟಿಹೆಚ್‌ಒ ಡಾ.ಗಿರೀಶ್

» ಚಿತ್ರದುರ್ಗ

ಆರೋಗ್ಯಕರ ಜೀವನ ಶೈಲಿ ನಿಮ್ಮದಾಗಿಸಿಕೊಂಡು ಮಧುಮೇಹ ಮುಕ್ತ ಗ್ರಾಮ ನಿರ್ಮಿಸಿ ಎಂದು ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಬಿ.ವಿ.ಗಿರೀಶ್ ಹೇಳಿದರು.

ಚಿತ್ರದುರ್ಗ ತಾಲ್ಲೂಕು ಬ್ಯಾಲಾಳ್ ಗ್ರಾಮ ಪಂಚಾಯಿತಿ ಸಭಾಂಗಣದಲ್ಲಿ ಗುರುವಾರ ಗ್ರಾಮೀಣ ಅಭಿವೃದ್ಧಿ ಪಂಚಾಯತ್ ರಾಜ್ ಇಲಾಖೆ, ಆರೋಗ್ಯ ಇಲಾಖೆ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ಗ್ರಾಮ ಆರೋಗ್ಯ ತರಬೇತಿ ಕಾರ್ಯಾಗಾರ ಮತ್ತು ವಿಶ್ವ ಮಧುಮೇಹ ದಿನದಲ್ಲಿ ಅವರು ಮಾತನಾಡಿದರು.

ಮಧುಮೇಹವು ದೀರ್ಘಕಾಲದ ಸ್ಥಿತಿಯಾಗಿದ್ದು, ಮೇದೋಜ್ಜೀರಕ ಗ್ರಂಥಿಯಿಂದ ಸಾಕಷ್ಟು ಇನ್ಸುಲಿನ್ ಉತ್ಪಾದನೆಯಾಗುವುದಿಲ್ಲ ಅಥವಾ ಇನ್ಸುಲಿನ್‌ಅನ್ನು ಪರಿಣಾಮಕಾರಿಯಾಗಿ ಬಳಸಲು ದೇಹದ ಅಸಮರ್ಥತೆಯಿಂದ ಉಂಟಾಗುತ್ತದೆ. ರಕ್ತದಲ್ಲಿನ ಗ್ಲೂಕೋಸ್ ಮಟ್ಟವನ್ನು ನಿಯಂತ್ರಿಸಲು ಇನ್ಸುಲಿನ್ ಅತ್ಯಗತ್ಯ ಎಂದರು.



2023ರಲ್ಲಿ ಪ್ರಕಟವಾದ ಇಂಡಿಯನ್ ಕೌನ್ಸಿಲ್ ಆಫ್ ಮೆಡಿಕಲ್ ರಿಸರ್ಚ್ - ಇಂಡಿಯಾ ಡಯಾಬಿಟಿಸ್ ಅಧ್ಯಯನದ ಪ್ರಕಾರ, ಮಧುಮೇಹದ ಹರಡುವಿಕೆಯು ದೇಶದಲ್ಲಿ 10.1 ಕೋಟಿಯಾಗಿದೆ ಎಂದು ತಿಳಿಸಿದರು. ತಾಲೂಕ ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್.ಮಂಜುನಾಥ್ ಮಾತನಾಡಿ, ಗ್ರಾಮ ಆರೋಗ್ಯ ನಿಗಾ ತಂಡ ಅಭಿವೃದ್ಧಿಯ ಮಾನದಂಡ ಅರಿತು ಸಕ್ರಿಯವಾಗಿ ಕಾರ್ಯಪ್ರವೃತ್ತರಾಗಬೇಕು. ವಿಶ್ವ ಮಧುಮೇಹ ದಿನವನ್ನು ಪ್ರತಿ ವರ್ಷ ನವೆಂಬರ್ 14 ರಂದು ಆಚರಿಸಲಾಗುತ್ತದೆ. ಇದುಮಧುಮೇಹದಬಗ್ಗೆಜಾಗತಿಕಜಾಗೃತಿ ಮೂಡಿಸಲು ನಿರ್ಣಾಯಕ ವೇದಿಕೆಯಾಗಿ ಕಾರ್ಯನಿರ್ವಹಿಸುತ್ತದೆ. ವಿಶ್ವಾದ್ಯಂತ ಲಕ್ಷಾಂತರ ಜನರ ಮೇಲೆ ಪರಿಣಾಮ ಬೀರುವ ಗಮನಾರ್ಹ ಸಾರ್ವಜನಿಕ ಆರೋಗ್ಯ ಸವಾಲಾಗಿದೆ. ಈ ಆಚರಣೆಯು ಮಧುಮೇಹ ತಡೆಗಟ್ಟುವಿಕೆ, ಆರಂಭಿಕ ರೋಗನಿರ್ಣಯ, ಪರಿಣಾಮಕಾರಿ ನಿರ್ವಹಣೆ ಮತ್ತು ಸಮಾನ ಆರೈಕೆಯ ಪ್ರವೇಶದಲ್ಲಿ ಸಮಗ್ರ ಕ್ರಮದ ತುರ್ತು ಅಗತ್ಯವನ್ನು ತೋರಿಸುತ್ತದೆ. ಈ ವರ್ಷದ ಥೀಮ್, 'ಬ್ರೇಕಿಂಗ್ ಅಡೆತಡೆಗಳು, ಅಂತರವನ್ನು ನಿವಾರಿಸುವುದು,' ಮಧುಮೇಹ ಆರೈಕೆಯಲ್ಲಿನ ಅಡೆತಡೆಗಳನ್ನು ನಿವಾರಿಸುವ ಸಾಮೂಹಿಕ ಬದ್ಧತೆಯನ್ನು ಎತ್ತಿ ತೋರಿಸುತ್ತದೆ ಮತ್ತು ರೋಗನಿರ್ಣಯ ಮಾಡಿದ ಪ್ರತಿಯೊಬ್ಬ ವ್ಯಕ್ತಿಯು ಉತ್ತಮ-ಗುಣಮಟ್ಟದ, ಕೈಗೆಟುಕುವ ಚಿಕಿತ್ಸೆಗೆ ಪ್ರವೇಶವನ್ನು ಹೊಂದಿದೆ ಎಂದು ಖಚಿತಪಡಿಸುತ್ತದೆ ಎಂದು ತಿಳಿಸಿದದರು.

ಕಾರ್ಯಾಗಾರದಲ್ಲಿ 30 ಜನರ ಮಧುಮೇಹ ಪರೀಕ್ಷೆ, ರಕ್ತದ ಒತ್ತಡ ಪರೀಕ್ಷೆ ನಡೆಸಲಾಯಿತು.

ಕಾರ್ಯಕ್ರದಲ್ಲಿ ಬ್ಯಾಲಹಾಳ್ ಗ್ರಾಮ ಪಂಚಾಯತಿ ಅಧ್ಯಕ್ಷೆ ಅನುಸೂಯಮ್ಮ ಮಹದೇವಪ್ಪ, ಉಪಾಧ್ಯಕ್ಷೆ ದ್ಯಾಮಕ್ಕ ದೇವೇಂದ್ರಪ್ಪ, ಪಂಚಾಯ್ತಿ ಅಭಿವೃದ್ಧಿ ಅಧಿಕಾರಿ ಅಸ್ಮ, ಸಮುದಾಯ ಆರೋಗ್ಯ ಅಧಿಕಾರಿ ದಿನೇಶ್, ಪ್ರಾಥಮಿಕ ಆರೋಗ್ಯ ಸುರಕ್ಷತಾ ಅಧಿಕಾರಿ ವಿನುತ, ಸದಸ್ಯರಾದ ಲಕ್ಷ್ಮೀದೇವಿ, ಬೈಯಪ್ಪ, ತಾಲೂಕು ಪಂಚಾಯತ್ ಡಿಟಿಸಿ ಸರಸ್ವತಿ, ಆಶಾ ಬೋಧಕಿ ತಬಿತಾ, ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ರಾಮಪ್ಪ, ಪ್ರವೀಣ್, ರೇಣುಕಾ ಸ್ವಾಮಿ, ಅಂಗನವಾಡಿ ಕಾರ್ಯಕರ್ತೆಯರು ಆಶಾ ಕಾರ್ಯಕರ್ತೆಯರು ಗ್ರಾಮದ ಸದಸ್ಯರು ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ನಗರಸಭೆ ಉಪ ಚುನಾವಣೆ: ಶಿಲ್ಪಮುರುಳಿ ಅವಿರೋಧ ಆಯ್ಕೆ

» **ಚಳ್ಳಕೆರೆ**

ಇಲ್ಲಿನ ನಗರಸಭೆಯ ನಾಲ್ಕನೇ ವಾರ್ಡ್‌ನ ಸದಸ್ಯರ ಆಯ್ಕೆಗಾಗಿ ಚುನಾವಣೆ ಈಗಾಗಲೇ ಘೋಷಣೆಯಾಗಿದ್ದು, ಒಟ್ಟು ಮೂವರು ಅಭ್ಯರ್ಥಿಗಳು ನಾಲ್ಕು ನಾಮಪತ್ರಗಳನ್ನು ಸಲ್ಲಿಸಿದ್ದು, ಎಲ್ಲವೂ ಕ್ರಮಬದ್ಧವಾಗಿವೆ ಎಂದು ಚುನಾವಣಾಧಿಕಾರಿ ಡಾ.ರೇವಣ್ಣ ತಿಳಿಸಿದರು. ನಾಮಪತ್ರ ವಾಪಾಸ್ ಪಡೆಯಲು ನ.15 ಕಡೆಯ ದಿನವಾಗಿದೆ. ನ.14ರಂದೇ ಉಳಿದ ಇಬ್ಬರು ಅಭ್ಯರ್ಥಿಗಳು ತಮ್ಮ ನಾಮಪತ್ರಗಳನ್ನು ವಾಪಾಸ್ ಪಡೆದಿರುತ್ತಾರೆ. ಅರುಣಜಗದೀಶ್ ಮತ್ತು ಮಂಜುನಾಥ ಎಂಬುವವರು ನಾಮಪತ್ರ ವಾಪಾಸ್ ಪಡೆದಿದ್ದು, ಕಣದಲ್ಲಿ ಏಕೈಕ ಅಭ್ಯರ್ಥಿಯಾಗಿ ಶಿಲ್ಪಮುರುಳಿ ಉಳಿದಿದ್ದು, ನ.26ರಂದು ನಾಲ್ಕನೇ ವಾರ್ಡ್‌ನಿಂದ ನೂತನ ಸದಸ್ಯರಾಗಿ ಶಿಲ್ಪಮುರುಳಿ ಅವಿರೋಧವಾಗಿ ಆಯ್ಕೆಯಾಗಿದ್ದಾರೆಂಬು ಘೋಷಣೆ ಬಾಕಿ ಇದೆ. ಕಳೆದ 2018ರ ನಗರಸಭೆ ಚುನಾವಣೆಯಲ್ಲಿ 19ನೇ ವಾರ್ಡ್‌ನ ಅಭ್ಯರ್ಥಿಯಾಗಿದ್ದ ಕವಿತಾವೀರೇಶ್ ಸಹ ಅವಿರೋಧವಾಗಿ ಆಯ್ಕೆಯಾಗಿದ್ದನ್ನು ಇಲ್ಲಿ ನೆನಪಿಸಿಕೊಳ್ಳಬಹುದಾಗಿದೆ.

### ಬೊಮ್ಮಸಮುದ್ರ ಜೂಜಾಟ: ಮೂವರು ಜೂಜು-ಕೋರರು, ಹಣ ವಶ

» **ಚಳ್ಳಕೆರೆ**



ಚಳ್ಳಕೆರೆ ಠಾಣಾ ವ್ಯಾಪ್ತಿಯ ಬೊಮ್ಮಸಮುದ್ರ ಗ್ರಾಮದ ಖಾಸಗಿ ಬಸ್ ನಿಲ್ದಾಣ ಹಿಂಭಾಗದ ಸಾರ್ವಜನಿಕ ರಸ್ತೆಯಲ್ಲಿ ಜೂಜಾಟವಾಡುತ್ತಿದ್ದ ಅದೇ ಗ್ರಾಮದ ಭೀಮಪ್ಪ ಇತರೆ ಮೂವರನ್ನು ವಶಕ್ಕೆ ಪಡೆದ ಪೊಲೀಸರು ಅವರಿಂದ ಜೂಜಾಟದ ಹಣ 1830ರೂ ವಶಪಡಿಸಿಕೊಂಡಿದ್ದಾರೆ. ಸಾರ್ವಜನಿಕರ ಮಾಹಿತಿ ಮೇರೆಗೆ ಪಿಎಸ್‌ಐ ಧರೆಪ್ಪಬಾಳಪ್ಪದೊಡ್ಡಮನಿ, ಪೇದೆಗಳಾದ ಶಂಕರಣ್ಣ, ಲಿಂಗರಾಜು, ಕಾಂತರಾಜು ನೇತೃತ್ವದಲ್ಲಿ ದಾಳಿ ನಡೆಸಿ ಮೂವರು ಜೂಜುಕೋರರು ಹಾಗೂ ಹಣವನ್ನು ವಶಪಡಿಸಿಕೊಂಡಿದ್ದಾರೆ.

### ರಾಷ್ಟ್ರಮಟ್ಟದ ಜ್ಯೂಡೋದಲ್ಲಿ ಸೈಯದ್ ಅಬ್ಬುಬಕ್ಕರ್‌ಗೆ ದ್ವಿತೀಯ ಸ್ಥಾನ



» **ಚಿತ್ರದುರ್ಗ**

ಜಮ್ಮು-ಕಾಶ್ಮೀರದಲ್ಲಿ ಇತ್ತೀಚೆಗೆ ನಡೆದ ರಾಷ್ಟ್ರ ಮಟ್ಟದ ಜ್ಯೂಡೊದಲ್ಲಿ ಚಿತ್ರದುರ್ಗದ ಸೈಯದ್ ಅಬ್ಬುಬಕ್ಕರ್ ದ್ವಿತೀಯ ಸ್ಥಾನ ಪಡೆದು ಜಿಲ್ಲೆ ಹಾಗೂ ರಾಜ್ಯಕ್ಕೆ ಕೀರ್ತಿ ತಂದಿದ್ದಾರೆ. ಆಫೀಜ್ ಫೈಲ್ವಾನ್‌ರವರ ಮೊಮ್ಮಗ, ಸದ್ದಾಂ ಫೈಲ್ವಾನ್ ಅಳಿಯ ಸೈಯದ್ ಅಬ್ಬುಬಕ್ಕರ್ ಸಾಧನೆಗೆ ಜ್ಯೂಡೋ ಸಂಸ್ಥೆ ಅಭಿನಂದಿಸಿದೆ.

### ಜಿಲ್ಲಾ ಸಮಿತಿ ಸದಸ್ಯತ್ವಕ್ಕೆ ನೇಮಕ ಮಾಡಲು ಆಹ್ವಾನ

» **ದಾವಣಗೆರೆ**

ಪ್ರಸಕ್ತ ಸಾಲಿನಲ್ಲಿ ಸೆರೆಬ್ರಲ್ ಪಾಲ್ಸಿ, ಮಸ್ಕುಲರ್ ಡಿಸ್ಟೋಫಿ, ಪಾರ್ಕಿನ್ಸನ್, ಮಲ್ಟಿಪಲ್ ಸ್ಕೆರೋಸಿಸ್ ((Crebral Palsy, Muscular Dystrophy, Parkinson's and Multiple Sclerosis) ಕಾಯಿಲೆಯಿಂದ ಬಳಲುತ್ತಿರುವ ವ್ಯಕ್ತಿಗಳ ಆರೈಕೆದಾರರಿಗೆ ಮಾಹೆಯಾನ ರೂ.1000/-ಗಳ ಪ್ರೋತ್ಸಾಹಧನವನ್ನು ನೀಡುವ ಯೋಜನೆಯಡಿ ವಿಕಲಚೇತನರ ಕ್ಷೇತ್ರದಲ್ಲಿ ಉತ್ತಮವಾಗಿ ಸೇವೆ ಸಲ್ಲಿಸುತ್ತಿರುವ ಒಂದು ಸ್ವಯಂ ಸೇವಾ ಸಂಸ್ಥೆಯ ಪ್ರತಿನಿಧಿಯನ್ನು ಜಿಲ್ಲಾ ಸಮಿತಿಯ ಸದಸ್ಯರನ್ನಾಗಿ ನೇಮಕ ಮಾಡಲು ನವಂಬರ್ 21 ರೊಳಗಾಗಿ ಕಚೇರಿಗೆ ಮನವಿ ಸಲ್ಲಿಸಬಹುದು.ಜಿಲ್ಲಾ ಸಮಿತಿಯ ಸದಸ್ಯತ್ವಕ್ಕೆ ಕನಿಷ್ಠ ಎರಡು ವರ್ಷಕ್ಕೂ ಹೆಚ್ಚು ವಿಕಲಚೇತನರ ಕ್ಷೇತ್ರದಲ್ಲಿ ಸೇವೆ ಸಲ್ಲಿಸುತ್ತಿರಬೇಕು, ಸಂಸ್ಥೆಯು ಪಿಡಬ್ಲ್ಯೂಡಿ ಆಕ್ಟ್-2016 ರನ್ವಯ ನೋಂದಣಿಯಾಗಿರಬೇಕು. ಸೆರೆಬ್ರಲ್ ಪಾಲ್ಸಿ, ಮಸ್ಕುಲರ್ ಡಿಸ್ಟೋಫಿ, ಪಾರ್ಕಿನ್ಸನ್, ಮಲ್ಟಿಪಲ್ ಸ್ಕೆರೋಸಿಸ್ ಈ ಅಂಗವಿಕಲತೆಗಳ ಸೇವೆ ಸಲ್ಲಿಸಿದ ಬಗ್ಗೆ ದಾಖಲೆ ಸಲ್ಲಿಸುವುದು. ಪ್ರಸಕ್ತ ಸಾಲಿಗೆ ಸದರಿ ಯೋಜನೆಯ ಜಿಲ್ಲಾ ಸಮಿತಿಯ ಸದಸ್ಯರನ್ನು ನೇಮಿಸಿಕೊಳ್ಳಲಾಗುವುದು ಎಂದು ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಅಧಿಕಾರಿ ಡಾ.ಕೆ.ಕೆ. ಪ್ರಕಾಶ್ ತಿಳಿಸಿದ್ದಾರೆ.

---

**ರೈತರಿಗೆ ಬಿಜೋಪಚಾರ, ಸುರಕ್ಷಿತ ಪೀಡೆನಾಶಕ ಬಳಕೆ ಕುರಿತು ತರಬೇತಿ ಹಾಗೂ ರಾಗಿ ಬೆಳೆಯ ಕ್ಷೇತ್ರೋತ್ಸವ ಕಾರ್ಯಕ್ರಮ**

# ಮಣ್ಣಿನ ಫಲವತ್ತತೆ ಹೆಚ್ಚಿಸಲು ಹಸಿರೆಲೆಗೊಬ್ಬರ ಅಗತ್ಯ






» **ಚಿತ್ರದುರ್ಗ**

ಮಣ್ಣಿನ ಫಲವತ್ತತೆ ಹೆಚ್ಚಿಸಲು ಹಸಿರೆಲೆಗೊಬ್ಬರ, ಬೆಳೆ ಪರಿವರ್ತನೆ ಮತ್ತು ಅಕ್ಕಡಿ/ಅಂತರ ಬೆಳೆ ಬೆಳೆಯುವುದು ಅವಶ್ಯಕ ಎಂದು ಹೊಳಲ್ಕೆರೆ ತಾಲ್ಲೂಕು ಸಹಾಯಕ ಕೃಷಿ ನಿರ್ದೇಶಕ ಚಂದ್ರಕುಮಾರ್ ಹೇಳಿದರು.

ಬಬ್ಬೂರುಫಾರಂ ಜಿಲ್ಲಾ ಕೃಷಿ ತರಬೇತಿ ಕೇಂದ್ರ ವತಿಯಿಂದ ಹೊಳಲ್ಕೆರೆ ತಾಲ್ಲೂಕಿನ ಬಿ.ದುರ್ಗ ಹೋಬಳಿಯ ಬಂಡೆಬೊಮ್ಮೇನಹಳ್ಳಿ ಗ್ರಾಮದಲ್ಲಿ ಗುರುವಾರ ರೈತರಿಗೆ ಬಿಜೋಪಚಾರ ಮತ್ತು ಸುರಕ್ಷಿತ ಪೀಡೆನಾಶಕ ಬಳಕೆ ಕುರಿತು ತರಬೇತಿ ಹಾಗೂ ಚಿಕ್ಕಜಾಜೂರು ರೈತ ಸಂಪರ್ಕ ಕೇಂದ್ರ ವತಿಯಿಂದ ರಾಗಿ ಬೆಳೆಯ ಕ್ಷೇತ್ರೋತ್ಸವ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಸುಸ್ಥಿರ ಕೃಷಿ ಮತ್ತು ಗುಣಮಟ್ಟದ ಆಹಾರದ ಉತ್ಪಾದನೆಗೆ ರೈತರು ಕೃಷಿ ಇಲಾಖೆಯ ಯೋಜನೆಗಳನ್ನು ಸದುಪಯೋಗ ಪಡೆಸಿಕೊಳ್ಳುವುದರ ಜೊತೆಗೆ ಜಿಲ್ಲಾ ಕೃಷಿ ತರಬೇತಿಕೇಂದ್ರದಿಂದ ಆಯೋಜಿಸಲಾಗುವ ತಾಂತ್ರಿಕ ತರಬೇತಿಗಳ ಪ್ರಯೋಜನೆ ಪಡೆಯಬೇಕು ಎಂದು ರೈತರಿಗೆ ಮನವಿ ಮಾಡಿದರು.

ಜಿಲ್ಲಾ ಕೃಷಿ ತರಬೇತಿಕೇಂದ್ರ ಬಬ್ಬೂರು ಫಾರಂನ ಸಹಾಯಕ ಕೃಷಿ ನಿರ್ದೇಶಕ ಹಾಗೂ ಮುಖ್ಯಸ್ಥ ಆರ್.ರಜನೀಕಾಂತ ಮಾತನಾಡಿ, ಜಿಲ್ಲಾಕೃಷಿ ತರಬೇತಿಕೇಂದ್ರದ ವತಿಯಿಂದ ರೈತರಿಗೆ ಕೃಷಿ ಮತ್ತು ಕೃಷಿ ಸಂಬಂಧಿತ ವಿಷಯಗಳ ಕುರಿತು ಆಯೋಜಿಸಲಾಗುತ್ತಿರುವ ಸಾಂಸ್ಥಿಕ ತರಬೇತಿ, ಹೊರಾಂಗಣ ತರಬೇತಿ, ಆನ್‌ಲೈನ್ ತರಬೇತಿಗಳ ಸದುಪಯೋಗ ಪಡೆದುಕೊಳ್ಳಲು ತಿಳಿಸಿದರು.

ಕೃಷಿಯಲ್ಲಿ ಗುಣಮಟ್ಟದ ಬಿತ್ತನೆ ಬೀಜದ ಮಹತ್ವ ಹಾಗೂ ಬೆಳೆಯ ಪ್ರಾರಂಭದ ಹಂತದಲ್ಲಿ ಬರುವಕೀಟ ಮತ್ತು ರೋಗಗಳ ನಿರ್ವಹಣೆಗೆ ಬೀಜೋಪಚಾರ ಅತ್ಯವಶ್ಯಕ ಎಂದು ತಿಳಿಸಿ ಅವರು, ಕಡಲೆ, ಹುರುಳಿ, ಅಲಸಂಧೆ ಬೆಳೆಗಳಲ್ಲಿ ಸೊರಗುರೋಗ ನಿರ್ವಹಣೆಗೆಕಾರ್ಬನ್ಡೈಜಿಮ್ @ 2 ಗ್ರಾಂ/ಕೆಜಿ ಬೀಜಕ್ಕೆಅಥವಾಟ್ರೈಕೋಡರ್ಮಾ @ 4-10 ಗ್ರಾಂ/ಪ್ರತಿಕೆಜಿ ಬೀಜಕ್ಕೆ ಹಾಕಿ ಬೀಜೋಪಚಾರ ಮಾಡುವುದು.ಹಾಗೆ ಸೂಕ್ಷ್ಮಾಣುಜೀವಿಗಳನ್ನು ಬಳಸಿ ಏಕದಳ ಧಾನ್ಯಗಳಾದ ರಾಗಿ, ಗೋಧಿ, ಮುಸುಕಿನ ಜೋಳ ಬೆಳೆಗಳಲ್ಲಿ ಇಳುವರಿಯನ್ನು ಹೆಚ್ಚಿಸಲು ಸಾರಜನಕಸ್ಥಿರೀಕರಿಸುವ ಜೀವಾಣುಗಳಾದ ಅಜೋಸ್ಪಿರಿಲಂ, ಅಜೊಟೊಬ್ಯಾಕ್ಟರ್‌ರನ್ನು ಹಾಗೂ ಬೇಳೆಕಾಳು ಬೆಳೆಗಳಾದ ಹುರಳಿ, ಅಲಸಂದೆ, ಕಡಲೆ ಮುಂತಾದ ಬೆಳೆಗಳಲ್ಲಿ ರೈಜೋಬಿಯಂಅಣುಜೀವಿ ಗೊಬ್ಬರವನ್ನು ಬೀಜೋಪಚಾರಕ್ಕೆ ಬಳಸಬಹುದು. ರಂಜಕ ಕರಗಿಸುವ ಜೀವಾಣುಗಳನ್ನು (ಪಿ.ಎಸ್.ಬಿ) ಎಲ್ಲಾ ಬೆಳೆಗಳಿಗೂ ಬಳಸಬಹುದು ಎಂದು ತಿಳಿಸಿದರು.

ಯಾವುದೇ ಕೀಟನಾಶಕ ಬಳಸುವುದಕ್ಕೆ ಮುಂಚೆ ಜೊತೆಯಲ್ಲಿ ಕೊಟ್ಟಿರುವ ಚೀಟಿ (ಲೇಬಲ್) ಓದಬೇಕು. ಸಿಂಪರಣಾ ದ್ರಾವಣದಿಂದ ರಕ್ಷಿಸಿಕೊಳ್ಳಲು ಯಾವಾಗಲೂ ಸರಿಯಾದ ಬಟ್ಟೆಗಳನ್ನು ಧರಿಸಬೇಕು. (ಕನ್ನಡಕ, ಮುಖವಾಡ, ಕೈ ಹೊದಿಕೆ ಮುಂತಾದವುಗಳು). ಸೋರುವಅಥವಾ ಹಾನಿಯಾಗಿರುವ ಸಿಂಪರಣಾ ಯಂತ್ರ (ಸ್ಪ್ರೈಯರ್) ವನ್ನು ಉಪಯೋಗಿಸಬಾರದು. ಗಾಳಿ ಬೀಸುತ್ತಿರುವ ದಿಕ್ಕಿನಿಂದಲೇ ಕೀಟನಾಶಕ ದ್ರಾವಣ ಸಿಂಪಡಿಸಬೇಕು ಮತ್ತು ಗಾಳಿಗೆ ವಿರುದ್ಧವಾದ ದಿಕ್ಕಿನಲ್ಲಿಸಿಂಪಡಿಸಬಾರದು. ಕೀಟನಾಶಕ ಉಸಿರಿನೊಡನೆ ಒಳಗೆ ಹೋಗುವುದನ್ನುತಡೆಯಲುಯಾವಾಗಲೂ ಸೊಂಟದಿಂದ ಕೆಳಮಟ್ಟದಲ್ಲಿ ಸಿಂಪಡಿಸಬೇಕು ಎಂದರು.

ಸಿಂಪರಣೆಯ ನಂತರ ಸಾಬೂನಿನಿಂದ ಸ್ನಾನ ಮಾಡಿ ಬಟ್ಟೆಯನ್ನು ಬದಲಾಯಿಸಬೇಕು. ಆನಂತರ ಆಹಾರ ಮತ್ತು ನೀರನ್ನು ಸೇವಿಸಬೇಕು. ಹಾಗೂ ಸಿಂಪರಣಾ ಸಮಯದಲ್ಲಿ ಉಪಯೋಗಿಸಿದ ಬಟ್ಟೆಯನ್ನು ಸ್ವಚ್ಛಗೊಳಿಸಬೇಕು. ಸಿಂಪರಣಾ ಸಮಯದಲ್ಲಿಎಲೆ-ಅಡಿಕೆಜಗಿಯಬಾರದು ಮತ್ತುಧೂಮಪಾನ ಮಾಡಬಾರದು ಮತ್ತು ತೊಂದರೆ ಉಂಟಾದಲ್ಲಿ ಸಿಂಪಡಿಸುವುದನ್ನು ನಿಲ್ಲಿಸಿ ವೈದ್ಯರ ಸಲಹೆ ಪಡೆಯಬೇಕು. ಕೀಟನಾಶಕಗಳನ್ನು ಮಕ್ಕಳ ಕೈಗೆ ಸಿಗದಂತೆ ಪ್ರತ್ಯೇಕ ಸ್ಥಳದಲ್ಲಿಟ್ಟು ಬೀಗ ಹಾಕಬೇಕು. ಖಾಲಿಯಾದ ಕೀಟನಾಶಕದ ಡಬ್ಬಗಳನ್ನು ಆಹಾರ ಧಾನ್ಯ ಸಂಗ್ರಹಿಸಲು ಉಪಯೋಗಿಸಬಾರದು. ಖಾಲಿಯಾದಡಬ್ಬವನ್ನು ನಾಶಪಡಿಸಿ ಮತ್ತು ನೆಲದೊಳಗೆ ಅದನ್ನು ಹೂತು ಹಾಕಬೇಕು ಎಂದು ತಿಳಿಸಿದರು.

ಆರೋಗ್ಯಕರ ಸ್ವಾವಲಂಬನೆ ಜೀವನ ನಡೆಸಲು ರೈತರು ಕೃಷಿಯಲ್ಲಿ ಖರ್ಚು ಕಡಿಮೆ ಮಾಡಿಕೊಳ್ಳಲು ಅನವಶ್ಯಕವಾಗಿ ರಸಾಯನಿಕಗೊಬ್ಬರ ಬಳಕೆ ಮಾಡದೆ ಸ್ಥಳೀಯವಾಗಿ ದೊರೆಯುವ ಕೃಷಿ ತ್ಯಾಜ್ಯಗಳಿಂದ ಕಾಂಪೋಷ್ಟ್ ಅಥವಾ ಎರೆಹುಳು ಗೊಬ್ಬರ ತಯಾರಿಸಿ ಬಳಸಬೇಕೆಂದರು.

ಆರೋಗ್ಯಕರಜೀವನ ನಡೆಸಲು ರೈತರು ಕುಟುಂಬಕ್ಕೆ ಬೇಕಾದ ಹಣ್ಣು, ಸೊಪ್ಪು ಮತ್ತು ತರಕಾರಿಗಳನ್ನು ತಮ್ಮ ಜಮೀನು ಅಥವಾ ಮನೆಯ ಹಿತ್ತಲಿನಲ್ಲಿ ಕನಿಷ್ಟ 1 ಅಥವಾ 2 ಗುಂಟೆ ಪ್ರದೇಶದಲ್ಲಿ ಪೌಷ್ಠಿಕ ಕೈತೋಟ ಮಾಡಿಕೊಳ್ಳುವುದು ಉತ್ತಮವೆಂದರು. ಅಲ್ಲದೆ ರೈತರು ಗಾಣದಎಣ್ಣೆ ಬಳಕೆ ಮತ್ತು ಸಿರಿಧಾನ್ಯಗಳನ್ನು ಬೆಳೆಯುವುದರ ಜೊತೆಗೆ ದಿನನಿತ್ಯದ ಆಹಾರ ಸೇವನೆಯಲ್ಲಿ ಅವುಗಳನ್ನು ಬಳಸುವುದು ಸೂಕ್ತ ಎಂದರು. ತರಬೇತಿಯ ನಂತರ ಆಹಾರ ಮತ್ತು ಪೌಷ್ಟಿಕಯೋಜನೆಯಡಿಆಯೋಜಿಸಲಾದ ಪರಮೇಶ್ವರಪ್ಪರವರ ರಾಗಿ ಬೆಳೆಯ ಕ್ಷೇತ್ರೋತ್ಸವ ಕಾರ್ಯಕ್ರಮದಲ್ಲಿ ರೈತಬಾಂಧವರು ಪಾಲ್ಗೊಂಡರು. ತರಬೇತಿ ಕಾರ್ಯಕ್ರಮದಲ್ಲಿ ರೈತ ಸಂಪರ್ಕಕೇಂದ್ರ, ಚಿಕ್ಕಜಾಜೂರಿನ ಕೃಷಿ ಅಧಿಕಾರಿ ಮಂಜುನಾಥ ಮೆಗಳಮನೆ, ಆಹಾರ ಮತ್ತು ಪೌಷ್ಟಿಕ ಯೋಜನೆಯ ತಾಂತ್ರಿಕ ಸಹಾಯಕ ಗೋಪಿ ಕೃಷ್ಣ ಹೆಚ್ ಕೆ., ಆತ್ಮಯೋಜನೆಯ ತಾಲ್ಲೂಕು ತಾಂತ್ರಿಕ ವ್ಯವಸ್ಥಾಪಕ ಸುರೇಶ್ ಎಂ.ಎಸ್, ಸಹಾಯಕ ತಾಂತ್ರಿಕ ವ್ಯವಸ್ಥಾಪಕಿ ರೂಪ, ಗ್ರಾಮ ಪಂಚಾಯಿತಿ ಸದಸ್ಯರಾದ ನಾಗರಾಜ, ರಾಜಪ್ಪ, ಪರಮೇಶ್ವರಪ್ಪ ಹಾಗೂ ರೈತರು ಇದ್ದರು.

---

# ಗುರುಕುಲ ಶಾಲೆ ವಿದ್ಯಾರ್ಥಿನಿಯರ ಸಾಧನೆಗೆ ಪ್ರಶಂಶಿಸಿದ ಸಿಎಂ ಸಿದ್ದರಾಮಯ್ಯ





» **ದಾವಣಗೆರೆ**

ಇಂದು ನಡೆದ ಮಕ್ಕಳ ದಿನಾಚರಣೆಯ ಕಾರ್ಯಕ್ರಮದಲ್ಲಿ 2024-25ನೇ ಸಾಲಿನಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಹಿನ್ನೆಲೆ ದಾವಣಗೆರೆಯ ಪ್ರತಿಷ್ಠಿತ ಶಾಲೆಗಳಲ್ಲಿ ಒಂದಾದ ಗುರುಕುಲ ವಸತಿಯುತ ಶಾಲೆಯ ವಿದ್ಯಾರ್ಥಿನಿ ಬಿ. ಸೃಜನ ಅವರು ಮುಖ್ಯಮಂತ್ರಿಗಳಿಂದ ಗೌರವ ಸನ್ಮಾನಕ್ಕೆ ಪಾತ್ರರಾದರು.

ಕರ್ನಾಟಕ ರಾಜ್ಯದ ವಿವಿಧ ಜಿಲ್ಲೆಗಳಿಂದ ಹಲವಾರು ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ವಿದ್ಯಾರ್ಥಿನಿಯರಿಗೆ ಸನ್ಮಾನಿಸುವ ಕಾರ್ಯಕ್ರಮಕ್ಕೆ ಗುರುಕುಲ ಶಾಲೆಯ ಸೃಜನ ಬಿ. ಹಾಗೂ ಮಿನಾಲ್ ಇವರಿಬ್ಬರನ್ನು ಆಯ್ಕೆ ಮಾಡಲಾಗಿತ್ತು. ಅಂತೆಯೇ ಇಂದು ಗುರುವಾರ ಬೆಂಗಳೂರಿನಲ್ಲಿ ನಡೆದ ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಮಕ್ಕಳ ದಿನಾಚರಣೆಯ ಅಂಗವಾಗಿ ಸನ್ಮಾನ ಮಾಡಿ ಗೌರವಿಸಿದರು.

ಅಂತರರಾಷ್ಟ್ರೀಯ ಮಟ್ಟದ ಫ್ಯಾಷನ್ ಮಾಡ್ಲಿಂಗ್ ನಲ್ಲಿ ಎರಡನೇ ಸ್ಥಾನ,

ರಾಜ್ಯ ಮತ್ತು ರಾಷ್ಟ್ರ ಮಟ್ಟದ ಫ್ಯಾಷನ್ ಮಾಡೆಲ್ ಸ್ಪರ್ಧೆಯಲ್ಲಿ 13 ಬಾರಿ ಜಯ, 3 ಬಾರಿ ದ್ವಿತೀಯ ಸ್ಥಾನ, 15 ಬಾರಿ ಟೈಟಲ್ ಹೋಲ್ಡರ್ ಪಡೆದಿದ್ದಾರೆ. ರಾಜ್ಯ ಮತ್ತು ರಾಷ್ಟ್ರ ಮಟ್ಟದ ನೃತ್ಯ ಸ್ಪರ್ಧೆಯಲ್ಲಿ 10 ಗೋಲ್ಡ್ ಮೆಡಲ್, 6 ಸಿಲ್ವರ್ ಮೆಡಲ್, 2 ಬ್ರೌನ್ಸ್ ಮೆಡಲ್ ಪಡೆದಿದ್ದಾರೆ.

ರಾಷ್ಟ್ರೀಯ ಮಟ್ಟದ ಕರಾಟೆಯಲ್ಲಿ ದ್ವಿತೀಯ ಸ್ಥಾನ ಪಡೆದಿದ್ದಾರೆ. ಈ ಎಲ್ಲ ಪ್ರಶಸ್ತಿಗಳು ಒಟ್ಟುಗೂಡಿಸಿದರೆ 25 ಗೋಲ್ಡ್ ಮೆಡಲ್, 30 ಸಿಲ್ವರ್ ಮೆಡಲ್, 10 ಬ್ರೌನ್ಸ್ ಮೆಡಲ್ ಗಳ ಪಡೆದು ಉತ್ತಮ ಸಾಧನೆ ಮಾಡಿದ್ದು, ಈ ಬಗ್ಗೆ ಸಿಎಂ ಸಿದ್ದರಾಮಯ್ಯ ಅವರ ಗಮನಕ್ಕೆ ತಂದಾಗ ಈ ವಿದ್ಯಾರ್ಥಿನಿಯ ಸಾಧನೆ ಮತ್ತು ಇದಕ್ಕೆ ಉತ್ತಮ ವೇದಿಕೆ ಕಲ್ಪಿಸಿ ಪ್ರೋತ್ಸಾಹಿಸಿದ ಗುರುಕುಲ ಶಾಲೆಯ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸುತ್ತಾ, ಪ್ರಶಂಶಿಸಿದರು.

ಕಾರ್ಯಕ್ರಮದಲ್ಲಿ ಉಪ ಮುಖ್ಯಮಂತ್ರಿಗಳಾದ ಡಿ.ಕೆ. ಶಿವಕುಮಾರ್, ಗೃಹ ಮಂತ್ರಿ ಜಿ. ಪರಮೇಶ್ವರ್, ಸಚಿವ ಜಮೀರ್ ಅಹ್ಮದ್ ಸೇರಿದಂತೆ ಶಾಸಕರುಗಳು ಉಪಸ್ಥಿತರಿದ್ದರು.

ಗುರುಕುಲ ವಸತಿಯುತ ಶಾಲೆ ಅಧ್ಯಕ್ಷ ಆರ್. ಅಬ್ದುಲ್ ಸೇರಿದಂತೆ ಶಾಲಾ ಆಡಳಿತ ಮಂಡಳಿ ಹಾಗೂ ಸಿಬ್ಬಂದಿ ವರ್ಗ ಮತ್ತು ಶಾಲಾ ಪೋಷಕರು ಹಾಗೂ ವಿದ್ಯಾರ್ಥಿಗಳು ಈ ವಿದ್ಯಾರ್ಥಿನಿಯರ ಸಾಧನೆಗೆ ಸಿಕ್ಕ ಸನ್ಮಾನಕ್ಕೆ ಶುಭ ಹಾರೈಸಿದ್ದಾರೆ.

---

## ಪರಿಸರದಲ್ಲಿ ಪಕ್ಷಿಗಳ ಪಾತ್ರ ಉಪನ್ಯಾಸ ಕಾರ್ಯಕ್ರಮ




» **ಚಿತ್ರದುರ್ಗ**

ಪಕ್ಷಿಗಳ ಸಂಕುಲವನ್ನು ಸಂರಕ್ಷಿಸದೆ ಇದ್ದರೇ,ಭವಿಷ್ಯದಲ್ಲಿ ಮಾನವ ಸಂಕುಲವೂ ಸರ್ವನಾಶವಾಗುವುದರಲ್ಲಿ ಸಂದೇಹವೇ ಇಲ್ಲ" ಎಂದು ಡಾನ್ ಬೋಸ್ಕೋ ಸಂಸ್ಥೆಯ ಮುಖ್ಯಸ್ಥರಾದ ಫಾ.ಉದಯಕುಮಾರ್ ಅಭಿಪ್ರಾಯಪಟ್ಟರು.ಡಾನ್ ಬೋಸ್ಕೋ ಸಭಾಂಗಣದಲ್ಲಿ ಚಿತ್ರದುರ್ಗ ಸೈನ್ಸ್ ಫೌಂಡೇಶನ್ ಚಿತ್ರದುರ್ಗ ಹಾಗೂ ಡಾನ್ ಬೋಸ್ಕೋ ಶಾಲೆಯ ಸಹಯೋಗದಲ್ಲಿ ನ. 12ರಂದು ಪಕ್ಷಿ ಪಿತಾಮಹ ಡಾ.ಸಲೀಂಅಲಿ ರವರ ಹುಟ್ಟು ಹಬ್ಬದ ಅಂಗವಾಗಿ ಏರ್ಪಡಿಸಲಾಗಿದ್ದ ಪರಿಸರದಲ್ಲಿ ಪಕ್ಷಿಗಳ ಪಾತ್ರ ಉಪನ್ಯಾಸ ಕಾರ್ಯಕ್ರಮದಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿ, ವಿದ್ಯಾರ್ಥಿಗಳು ಪಕ್ಷಿಗಳ ಬಗ್ಗೆ, ಪರಿಸರದ ಬಗ್ಗೆ ಕಾಳಜಿವಹಿಸಬೇಕು.ಪಕ್ಷಿಗಳ ಸಂಕುಲ ಮತ್ತು ನಿಸರ್ಗವನ್ನು ಅರ್ಥೈಸುವಲ್ಲಿ ಸಲೀಂ ಅಲಿ ದೇಶಾದ್ಯಂತ ಪಕ್ಷಿಗಳ ಸಮೀಕ್ಷೆ ಮಾಡಿದ ಮೊದಲ ಭಾರತೀಯ" ಎಂದು ತಿಳಿಸಿದರು. ಚಿತ್ರದುರ್ಗ ಸೈನ್ಸ್ ಫೌಂಡೇಶನ್ ಅಧ್ಯಕ್ಷ ಡಾ.ಜಿ. ಎನ್.ಮಲ್ಲಿಕಾರ್ಜುನಪ್ಪ ನವರು, " ಪಕ್ಷಿಗಳ ಉಳಿವಿನ ಬಗ್ಗೆ, ಪಕ್ಷಿಗಳ ವಾಸಸ್ಥಾನಗಳ ಬಗ್ಗೆ ಮಕ್ಕಳಲ್ಲಿ ಜಾಗೃತಿ ಮೂಡಿಸುವುದು ನಮ್ಮೆಲ್ಲರ ಆದ್ಯ ಕರ್ತವ್ಯ " ಎಂದು ತಿಳಿಸಿದರು ಕಾರ್ಯಕ್ರಮದಲ್ಲಿ ಪಕ್ಷಿಗಳ ಪಾತ್ರದ ಬಗ್ಗೆ ವನ್ಯಜೀವಿ ಛಾಯಾಗ್ರಾಹಕ ಹಾಗೂ ಪಕ್ಷಿ ಪ್ರೇಮಿ ಎಂ.ಕಾರ್ತೀಕ್ ಉಪನ್ಯಾಸ ನೀಡುತ್ತಾ, "ಪಕ್ಷಿವೀಕ್ಷಣೆ ಅತ್ಯಂತ ಕುತೂಹಲಕಾರಿ ಹಾಗೂ ದುಬಾರಿಯಲ್ಲದ ಹವ್ಯಾಸ, ಅರಣ್ಯಗಳು ಉಳಿಯಲು ಪಕ್ಷಿಗಳ ಅತ್ಯಂತ ಪ್ರಮುಖ ಪಾತ್ರ ವಹಿಸುತ್ತವೆ. ಪರಿಸರ ಉಳಿಯುವಿಕೆಯಿಂದ ಮಳೆ ಬರಲು ಸಾಧ್ಯ.ಪರಿಸರದಿಂದ ನಾವು ಸಾಕಷ್ಟು ಪಡೆದಿದ್ದೇವೆ, ಸ್ವಲ್ಪವಾದರೂ ಪರಿಸರಕ್ಕೆ ನಮ್ಮ ಕೊಡುಗೆ ನೀಡಲೇಬೇಕಾಗಿದೆ. ಪ್ರತಿಯೊಬ್ಬರೂ ಪಕ್ಷಿಪ್ರೇಮ ಹಾಗೂ ಪರಿಸರ ಪ್ರೇಮ ಬೆಳೆಸಿಕೊಳ್ಳಿ" ಎಂದು ತಿಳಿಸಿದರು. ಚಿತ್ರದುರ್ಗ ಸೈನ್ಸ್ ಫೌಂಡೇಶನ್ ಕಾರ್ಯದರ್ಶಿ ಎಚ್.ಎಸ್.ಟಿ.ಸ್ವಾಮಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಸಂಚಾಲಕ ಹೆಚ್.ಮಂಜುನಾಥ್ ನಿರೂಪಿಸಿದರು.

---

**ಪ್ರಮುಖ ಸುದ್ದಿ**

# ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ನೆಹರು ಜಯಂತಿ



» **ಚಿತ್ರದುರ್ಗ**

ಪಂಚ ವಾರ್ಷಿಕ ಯೋಜನೆ ಮೂಲಕ ಬಡತನದಲ್ಲಿದ್ದ ಭಾರತವನ್ನು ಸ್ವಾವಲಂಭಿಯನ್ನಾಗಿ ಮಾಡಿದ ಕೀರ್ತಿ ಪಂಡಿತ್ ಜವಾಹರಲಾಲ್ ನೆಹರುರವರಿಗೆ ಸಲ್ಲುತ್ತದೆ ಎಂದು ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಎಂ.ಕೆ.ತಾಜ್‌ಪೀರ್ ಹೇಳಿದರು.

ಕಾಂಗ್ರೆಸ್ ಕಚೇರಿಯಲ್ಲಿ ಗುರುವಾರ ನಡೆದ ಜಯಂತಿಯಲ್ಲಿ ನೆಹರು ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ ಮಾತನಾಡಿದರು.

ದೇಶದ ಸ್ವಾತಂತ್ರ್ಯಕ್ಕಾಗಿ ಹೋರಾಡಿದ ನೆಹರು ಎ.ಐ.ಸಿ.ಸಿ. ಅಧ್ಯಕ್ಷರಾಗಿ ದೇಶದ ಪ್ರಥಮ ಪ್ರಧಾನಿಯಾಗಿ ಅನೇಕ ಯೋಜನೆಗಳನ್ನು ಕೊಡುಗೆಯಾಗಿ ನೀಡಿದ್ದಾರೆ. ಮಹಾತ್ಮಗಾಂಧಿ, ಸರ್ದಾರ್ ವಲ್ಲಭಭಾಯಿ ಪಟೇಲ್, ಡಾ.ಬಾಬು ಜಗ್‌ಜೀವನ್‌ರಾಂ ಇವರುಗಳು ನೆಹರು ಜೊತೆ ಅಭಿವೃದ್ದಿಗೆ ಕೈಜೋಡಿಸುತ್ತಿದ್ದರು. ಕೃಷಿ, ಉದ್ಯೋಗ, ಶಿಕ್ಷಣಕ್ಕೆಹೆಚ್ಚಿನಒತ್ತುನೀಡುತ್ತಿದ್ದನೆಹರುರವರ ದೂರದೃಷ್ಟಿಯಿಂದ ಭಾರತದಲ್ಲಿ ಆಹಾರಕ್ಕೆ ಕೊರತೆಯಿಲ್ಲದಂತಾಗಿದೆ. ಅನೇಕ ಡ್ಯಾಂ, ಅಣೆಕಟ್ಟೆ, ವಿಶ್ವವಿದ್ಯಾನಿಲಯಗಳನ್ನು ತೆರೆದಿದ್ದಾರೆ. ದೆಹಲಿಯಲ್ಲಿ ನೆಹರು ವಿಶ್ವವಿದ್ಯಾನಿಲಯವಿದೆ ಎಂದರು.

ಜಿಲ್ಲಾ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಡಿ.ಎನ್.ಮೈಲಾರಪ್ಪ ಮಾತನಾಡಿ ಜವಾಹರಲಾಲ್‌ರವರಿಗೆ ಮಕ್ಕಳೆಂದರೆ ಪಂಚ ಪ್ರಾಣ, ಅದಕ್ಕಾಗಿಯೇ ಚಾಚಾ ನೆಹರು ಎಂದು ಕರೆಯುತ್ತಿದ್ದರು. ಪಂಚವಾರ್ಷಿಕ ಯೋಜನೆಗಳ ರುವಾರಿಯಾಗಿದ್ದ ನೆಹರುರವರು ಅನೇಕ ಡ್ಯಾಂಗಳನ್ನು ಕಟ್ಟಿಸಿದ್ದರಿಂದ ವಿದೇಶಗಳಿಗೆ ಆಹಾರವನ್ನು ಪೂರೈಸುವಷ್ಟು ಭಾರತ ಶಕ್ತಿಶಾಲಿಯಾಗಿ ಬೆಳೆದಿದೆ ಎಂದು ಗುಣಗಾನ ಮಾಡಿದರು.

ಗ್ಯಾರೆಂಟಿ ಅನುಷ್ಠಾನಗಳ ಸಮಿತಿ ಅಧ್ಯಕ್ಷ ಆರ್.ಶಿವಣ್ಣ ಮಾತನಾಡಿ ನೆಹರು ಕಾಲದಿಂದಲೂ ಕಾಂಗ್ರೆಸ್ ಎಲ್ಲಾ ಜಾತಿ ಧರ್ಮದವರನ್ನು ಒಟ್ಟಿಗೆ ಕೊಂಡೊಯ್ಯುತ್ತಿದೆ. ಈಗ ಕೇಂದ್ರದಲ್ಲಿ ಅಧಿಕಾರ ನಡೆಸುತ್ತಿರುವ ಕೋಮುವಾದಿ ಬಿಜೆಪಿ.ಯವರು ಜಾತಿ ಧರ್ಮಗಳ ನಡುವೆ ರಾಜಕಾರಣ ಮಾಡುತ್ತ ದೇಶದಲ್ಲಿ ಶಾಂತಿ ಭಂಗ ಉಂಟು ಮಾಡುತ್ತಿದ್ದಾರೆ. ಜವಾಹರಲಾಲ್ ನೆಹರುರವರು ಸಾಮಾಜಿಕ ನ್ಯಾಯದ ಹರಿಕಾರರಾಗಿದ್ದರು ಎಂದು ಹೇಳಿದರು.

ನಗರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಯು.ಲಕ್ಷ್ಮಿಕಾಂತ್ ಮಾತನಾಡುತ್ತ ನೆಹರುರವರ ಬಗ್ಗೆ ಮಾತನಾಡುವ ಯೋಗ್ಯತೆ ಬಿಜೆಪಿ.ಗಿಲ್ಲ. ಕಾಂಗ್ರೆಸ್‌ಗೆ ತ್ಯಾಗ ಬಲಿದಾನದ ಇತಿಹಾಸವಿದೆ. ಇಂದಿರಾಗಾಂಧಿ ಪ್ರಧಾನಿಯಾಗಿದ್ದಾಗಲೆ ಅಂಗರಕ್ಷಕರಿಂದ ಹತ್ಯೆಗೀಡಾದರು. ನಂತರ ಅವರ ಮಗ ಪ್ರಧಾನಿ ಹುದ್ದೆಯನ್ನು ಅಲಂಕರಿಸಿ ಮಾಹಿತಿ ತಂತ್ರಜ್ಞಾನಕ್ಕೆ ಆದ್ಯತೆ ನೀಡಿದ್ದರಿಂದ ಎಲ್ಲರ ಕೈಯಲ್ಲೂ ಮೊಬೈಲ್ ಹರಿದಾಡುತ್ತಿದೆ. ಅಂತಹ ನಾಯಕನ ಹತ್ಯೆಯಾಯಿತು. ಗಾಂಧಿ ಕುಟುಂಬ ದೇಶಕ್ಕಾಗಿ ಪ್ರಾಣಾರ್ಪಣೆ ಮಾಡಿದೆ ಎಂದು ಸ್ಮರಿಸಿದರು.

ಜಿಲ್ಲಾ ಕಾಂಗ್ರೆಸ್ ಎಸ್ಸಿ.ವಿಭಾಗದ ಅಧ್ಯಕ್ಷ ಜಯಣ್ಣ, ಹೆಚ್.ಶಬ್ಬೀರ್‌ಭಾಷ, ಮುದಸಿರ್ ನವಾಜ್, ಚಿದಾನಂದಮೂರ್ತಿ, ಸುಧಾ, ಗುರುರಾಜ್, ಜಗದೀಶ್, ಆರ್.ರಮೇಶ್

ಕುಮಾರಸ್ವಾಮಿ, ಎಸ್ಸಿ.ವಿಭಾಗದ ಉಪಾಧ್ಯಕ್ಷ ಡಿ.ಕುಮಾರ್ ಪಿಳ್ಳೆಕೆರನಹಳ್ಳಿ, ಬ್ಲಾಕ್ ಕಾಂಗ್ರೆಸ್ ಕಾರ್ಯದರ್ಶಿ ಎಂ.ಡಿ.ಉಸ್ಮಾನ್, ಜಿಲ್ಲಾ ಕಾಂಗ್ರೆಸ್ ಉಪಾಧ್ಯಕ್ಷ ಎಸ್.ಎನ್.ರವಿಕುಮಾರ್ ಇನ್ನು ಅನೇಕರು ನೆಹರು ಜಯಂತಿಯಲ್ಲಿ ಪಾಲ್ಗೊಂಡಿದ್ದರು.

## ಫಾಸ್ಟ್ ನ್ಯೂಸ್

### ಮೈಸೂರು ಕಿಸಾನ್ ಮಾಲ್ ಸ್ಥಾಪನೆಗೆ ಅರ್ಜಿ

» ಚಿತ್ರದುರ್ಗ

ರಾಜ್ಯ ಸರ್ಕಾರ 2024-25 ಬಜೆಟ್‌ನಲ್ಲಿ ಪ್ರಸ್ತಾಪಿಸಿದಂತೆ, ಸಮಗ್ರ ತೋಟಗಾರಿಕೆ ಅಭಿವೃದ್ಧಿ ಯೋಜನೆಯಡಿ ಚಿತ್ರದುರ್ಗ ಜಿಲ್ಲೆಯ ತೋಟಗಾರಿಕೆ ಇಲಾಖೆ ಆವರಣದಲ್ಲಿ ಮೈಸೂರು ಕಿಸಾನ್ ಮಾಲ್ ಸ್ಥಾಪಿಸಲು ಅರ್ಹ ರೈತ ಉತ್ಪಾದಕ ಸಂಸ್ಥೆಗಳಿಂದ ಆಸಕ್ತಿ ಅಭಿವ್ಯಕ್ತಪಡಿಸುವಿಕೆಯನ್ನು ಆಹ್ವಾನಿಸಲಾಗಿದೆ. ಕರ್ನಾಟಕ ಪಬ್ಲಿಕ್ ಪ್ರೊಕ್ಯುರ್‌ಮೆಂಟ್ ಪೋರ್ಟಲ್ ನಲ್ಲಿ ಆಸಕ್ತ ರೈತರ ಉತ್ಪಾದಕ ಸಂಘಗಳು ನ.29ರ ಒಳಗಾಗಿ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 9449103240 ಸಂಪರ್ಕಿಸಲು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

### ಬಬ್ಬೂರು ತೋಟಗಾರಿಕೆ ಸಂಶೋಧನಾ ಕೇಂದ್ರದಲ್ಲಿ ಆಯೋಜನೆ ಕೃಷಿಮೇಳ



» ಚಿತ್ರದುರ್ಗ

ಶಿವಮೊಗ್ಗ ಕೆಳದಿ ಶಿವಪ್ಪನಾಯಕ ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದ ಆಡಳಿತಕ್ಕೊಳಪಟ್ಟಿರುವ ಚಿತ್ರದುರ್ಗ ಜಿಲ್ಲೆಯ ಹಿರಿಯೂರು ತಾಲ್ಲೂಕಿನ ಬಬ್ಬೂರು ಫಾರಂನ ವಲಯ ಕೃಷಿ ಮತ್ತು ತೋಟಗಾರಿಕೆ ಸಂಶೋಧನಾ ಕೇಂದ್ರ ಹಾಗೂ ಕೃಷಿ ಮತ್ತು ಕೃಷಿ ಸಂಬಂಧಿತ ಇಲಾಖೆಗಳ ವತಿಯಿಂದ ಬಬ್ಬೂರು ಫಾರಂನ ವಲಯ ಕೃಷಿ ಮತ್ತು ತೋಟಗಾರಿಕೆ ಸಂಶೋಧನಾ ಕೇಂದ್ರದಲ್ಲಿ ಇದೇ ನ.16 ಮತ್ತು 17ರಂದು ಎರಡು ದಿನಗಳ ಕೃಷಿಮೇಳ ಆಯೋಜಿಸಲಾಗಿದೆ. ಈ ಕೃಷಿಮೇಳದ ಆಕರ್ಷಣೆಯಾಗಿ ಕೃಷಿ ಮತ್ತು ತೋಟಗಾರಿಕೆ ಬೆಳೆಗಳ ಪ್ರಾತ್ಯಕ್ಷಿಕೆಗಳು, ವಿವಿಧ ಬೆಳೆಗಳ ಸಂಶೋಧನಾ ಪ್ರಾತ್ಯಕ್ಷಿಕೆಗಳು, ಜೇನುಕೃಷಿ ಮತ್ತು ಕೀಟ ವಿಸ್ಮಯ, ಗ್ರಾಮೀಣ ಕೃಷಿ ಹವಾಮಾನ ಘಟಕ, ಬಾಡಿಗೆ ಆಧಾರಿತ ಯಂತ್ರೋಪಕರಣಗಳ ಘಟಕ, ಕೃಷಿ ಸಂಬಂಧಿತ ವಸ್ತುಪ್ರದರ್ಶನ ಮಳಿಗೆಗಳು, ಸಿರಿಧಾನ್ಯ ಮಹತ್ವ, ಸುಧಾರಿತ ಉತ್ಪಾದನಾ ತಾಂತ್ರಿಕತೆಗಳು ಹಾಗೂ ಮೌಲ್ಯವರ್ಧನೆ, ತೋಟಗಾರಿಕೆ ಬೆಳೆಗಳಲ್ಲಿ ಸಮಗ್ರ ಬೇಸಾಯ ಕ್ರಮಗಳು, ಪೌಷ್ಠಿಕ ಆಹಾರಕ್ಕಾಗಿ ವಿಕಸಿತ ಕೃಷಿ ಹಾಗೂ ಆಧುನಿಕ ಕೃಷಿ ಯಂತ್ರೋಪಕರಣಗಳ ಉಪಯೋಗ ಮತ್ತು ಬಳಕೆ ಕುರಿತು ತಾಂತ್ರಿಕ ಸಮಾವೇಶ ಜರುಗಲಿದೆ. ಹೆಚ್ಚಿನ ಸಂಖ್ಯೆಯಲ್ಲಿ ರೈತಬಾಂಧವರು ಭಾಗವಹಿಸಿ ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಕೇಂದ್ರದ ಸಹ ಸಂಶೋಧನಾ ನಿರ್ದೇಶಕರಾದ ಡಾ. ಶರಣಪ್ಪ ಜಂಗಂಡಿ ತಿಳಿಸಿದ್ದಾರೆ.

### ನ.15 ರಂದು ಜಿಲ್ಲಾ ರಸ್ತೆ ಸುರಕ್ಷತಾ ಸಮಿತಿ ಸಭೆ

» ದಾವಣಗೆರೆ

ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ರಸ್ತೆ ಸುರಕ್ಷತಾ ಸಮಿತಿಯ ಅಧ್ಯಕ್ಷರಾದ ಗಂಗಾಧರಸ್ವಾಮಿ.ಜಿ.ಎಂ ಇವರ ಅಧ್ಯಕ್ಷತೆಯಲ್ಲಿ ನವಂಬರ್ 15 ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಜಿಲ್ಲಾ ರಸ್ತೆ ಸುರಕ್ಷತಾ ಸಮಿತಿ ಸಭೆಯನ್ನು ಆಯೋಜಿಸಲಾಗಿದೆ ಎಂದು ಲೋಕೋಪಯೋಗಿ ಇಲಾಖೆ ಕಾರ್ಯಪಾಲಕ ಇಂಜಿನಿಯರ್ ಹಾಗೂ ಜಿ.ರ.ಸು.ಸಮಿತಿಯ ಸದಸ್ಯ ಕಾರ್ಯದರ್ಶಿ ತಿಳಿಸಿದ್ದಾರೆ.

### ನ.19,20 ರಂದು ಪ್ರಾಯೋಗಿಕ ಕಾರ್ಯಾಗಾರ

» ದಾವಣಗೆರೆ

ದಾವಣಗೆರೆ ಉಪ ಪ್ರಾದೇಶಿಕ ವಿಜ್ಞಾನ ಕೇಂದ್ರ , ಶಾಲಾ ಶಿಕ್ಷಣ ಇಲಾಖೆ ಹಾಗೂ ರಾಯಲ್ ಕೆಮಿಸ್ಟ್ರಿ ಇಂಡಿಯಾ ಪ್ರೈವೆಟ್ ಲಿಮಿಟೆಡ್ ವತಿಯಿಂದ ದಾವಣಗೆರೆ ಉತ್ತರ ದಕ್ಷಿಣ ಹಾಗೂ ಹರಿಹರ ತಾಲ್ಲೂಕುಗಳ ಸರ್ಕಾರಿ ಅನುದಾನಿತ ಪ್ರೌಢಶಾಲೆಗಳ ವಿಜ್ಞಾನ ಶಿಕ್ಷಕರಿಗೆ ನವಂಬರ್ 19 ಮತ್ತು 20 ರಂದು ಆನಗೋಡು ಹೋಬಳಿಯ ಹುಳುಪಿನಕಟ್ಟೆಯಲ್ಲಿರುವ ಉಪ-ಪ್ರಾದೇಶಿಕ ವಿಜ್ಞಾನ ಕೇಂದ್ರದಲ್ಲಿ ಎರಡು ದಿನಗಳ ಪ್ರಾಯೋಗಿಕ ಕಾರ್ಯಾಗಾರವನ್ನು ಆಯೋಜಿಸಲಾಗಿದೆ ಎಂದು ಉಪ ಪ್ರಾದೇಶಿಕ ವಿಜ್ಞಾನ ಕೇಂದ್ರದ ಉಪ ನಿರ್ದೇಶಕರು ಹಾಗೂ ಸದಸ್ಯ ಕಾರ್ಯದರ್ಶಿ ತಿಳಿಸಿದ್ದಾರೆ.

### ಕನಕ ಜಯಂತಿ

» ದಾವಣಗೆರೆ

ಜಿಲ್ಲಾಡಳಿತ ವತಿಯಿಂದ ನವಂಬರ್ 18 ರಂದು ಬೆಳಗ್ಗೆ 11 ಗಂಟೆಗೆ ಜಿಲ್ಲಾಡಳಿತ ಭವನದ ತುಂಗಭದ್ರಾ ಸಭಾಂಗಣದಲ್ಲಿ ಕನಕ ಜಯಂತಿ ಆಚರಣೆಯ ಸಮಾರಂಭವನ್ನು ಏರ್ಪಡಿಸಲಾಗಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ರವಿಚಂದ್ರ ತಿಳಿಸಿದ್ದಾರೆ.

---

ರಾಷ್ಟ್ರೀಯ ಗ್ರಂಥಾಲಯ ಸಪ್ತಾಹ ಉದ್ಘಾಟನಾ ಸಮಾರಂಭ

# ವಿದ್ಯಾರ್ಥಿಗಳು ಪುಸ್ತಕ ಓದುವ ಅಭ್ಯಾಸ ಅಳವಡಿಸಿಕೊಂಡರೆ ಉತ್ತಮ ಸಾಧನೆ ಮಾಡಲು ಸಾಧ್ಯ: ಡಾ.ಪ್ರಭಾ ಮಲ್ಲಿಕಾರ್ಜುನ್

» ದಾವಣಗೆರೆ

ವಿದ್ಯಾರ್ಥಿಗಳು ಪುಸ್ತಕಗಳನ್ನು ಓದುವ ಅಭ್ಯಾಸವನ್ನು ಜೀವನದಲ್ಲಿ ಸದಾ ಬೆಳೆಸಿಕೊಂಡರೆ ಉತ್ತಮ ಸಾಧನೆ ಮಾಡಲು ಸಾಧ್ಯ ಎಂದು ಸಂಸದರಾದ ಡಾ.ಪ್ರಭಾ ಮಲ್ಲಿಕಾರ್ಜುನ್ ತಿಳಿಸಿದರು

ಅವರು (ನ.14) ಸಾರ್ವಜನಿಕ ಗ್ರಂಥಾಲಯ ಇಲಾಖೆ, ನಗರ ಕೇಂದ್ರ ಗ್ರಂಥಾಲಯ, ದಾವಣಗೆರೆ ಇವರ ವತಿಯಿಂದ ನಗರದ ಸ್ಟಿಲರ್ ಜ್ಯೂಬಲಿ ಶಾಖಾ ಗ್ರಂಥಾಲಯದಲ್ಲಿ ನವಂಬರ್ 14 ರಂದು ಆಯೋಜಿಸಲಾಗಿದ್ದ. ರಾಷ್ಟ್ರೀಯ ಗ್ರಂಥಾಲಯ ಸಪ್ತಾಹದ ಸಮಾರಂಭ ಉದ್ಘಾಟಿಸಿ ಮಾತನಾಡಿದರು. ಪೋಷಕರು ಮಕ್ಕಳನ್ನು ಪುಸ್ತಕ ಹಾಗೂ ಕಥೆಗಳನ್ನು ಕಲಿಯಲು ಪ್ರೋತ್ಸಾಹಿಸಬೇಕು. ಅದು ಅವರಿಗೆ ಜೀವನವದ ಒತ್ತಡ ಮುಕ್ತ



ಜೀವನಕ್ಕೆಬದಲಾಯಿಸಲು ಪ್ರೇರೇಪಿಸುತ್ತದೆ. ಮತ್ತು ಅವರಿಗೆ ಸಕಾರಾತ್ಮಕ ಶಕ್ತಿಯನ್ನು ನೀಡುತ್ತದೆ ಎಂದು ತಿಳಿಸಿದರು.

ಗ್ರಂಥಾಲಯದಲ್ಲಿ ಗಣಕಯಂತ್ರಗಳನ್ನು, ಹಾಗೂ ಇನ್ನೂ ಹೆಚ್ಚಿನ ಪುಸ್ತಕಗಳನ್ನು ನೀಡಲು ಪ್ರಮಾಣಿಕವಾಗಿ ಪ್ರಯತ್ನ ಮಾಡುತ್ತೇನೆ ಎಂದು ತಿಳಿಸಿದರು.

ಮಕ್ಕಳಿಗೆ ಯಾವುದರಲ್ಲಿ ಆಸಕ್ತಿ ಇದೆಯೋ ಅಂತಹ ಮಾರ್ಗದಲ್ಲಿ ಅವರಿಗೆ ಕಲಿಯಲು ಪ್ರೋತ್ಸಾಹ ನೀಡಬೇಕು. ಹಾಗೂ ವಿದ್ಯಾರ್ಥಿಗಳು ಓದುವ ಸಮಯದಲ್ಲಿ ಅಲ್ಪ ಸಮಯಮಾಡಿಕೊಂಡು ಇತಿಹಾಸಕಾರರು, ಸಾಹಿತಿಗಳ ಹಾಗೂ ಸಂವಿಧಾನದ ಬಗ್ಗೆ ಓದುವ ಆಸಕ್ತಿ ಬೆಳೆಸಿಕೊಳ್ಳಬೇಕು ಎಂದು ತಿಳಿಸಿದರು. ಸಾರ್ವಜನಿಕರಿಗಾಗಿ ಎಸ್.ಎಸ್‌ಕೇರ್ ಟ್ರಸ್ಟ್‌ನಿಂದ ಡಯಾಬಿಟಿಸ್ ಬಗ್ಗೆ ಉಚಿತವಾಗಿ ಪರೀಕ್ಷೆ ಮಾಡಲಾಗುವುದು. ಹಾಗೂ ಚಲ್ಡ್‌ಕೇರ್ ಟ್ರಸ್ಟ್‌ನಿಂದ ಮಕ್ಕಳ ಮಧುಮೇಹ ಉಚಿತವಾಗಿ ಪರಿಶೀಲನೆ ಮಾಡಲಾಗುವುದು ಎಂದು ತಿಳಿಸಿದರು.

ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ದಿನೇಶ್ ಕೆ.ಶೆಟ್ಟಿ ಮಾತನಾಡಿ ಗ್ರಂಥಾಲಯ ಇಲಾಖೆಯವರು ಗ್ರಂಥಾಲಯ ಕಟ್ಟಡ ನಿರ್ಮಾಣ ಮಾಡಲು ಜಾಗ ಕೇಳಿದರೆ ನಿವೇಶನ ನೀಡಲು ಪ್ರಾಮಾಣಿಕವಾಗಿ ಪ್ರಯತ್ನ ಮಾಡುತ್ತೇನೆ ಎಂದು ತಿಳಿಸಿದರು.

ಯಾರು ಕಷ್ಟಪಟ್ಟು ಓದುತ್ತಾರೋ, ಅಂತಹವರು ಮುಂದೆ ಬರುತ್ತಾರೆ, ಓದಿ ಒಳ್ಳೆಯ ನಾಗರೀಕರಾಗುತ್ತಾರೆ. ನಮ್ಮ ಜಿಲ್ಲೆಗೆ ವಿದ್ಯಾರ್ಥಿಗಳಿಂದ ಇನ್ನೂ ಮಹತ್ತರವಾದ ಹೆಸರು ಬರುವಂತಾಗಲಿ ಎಂದು ಆಶಿಸಿದರು. ಹಿರಿಯ ಪತ್ರಕರ್ತರಾದ ಹೆಚ್.ಬಿ. ಮಂಜುನಾಥ್ ಉಪನ್ಯಾಸ ನೀಡಿದರು. ಕಾರ್ಯಕ್ರಮದಲ್ಲಿ ಮಹಾಪಾಲಿಕೆ ಮಹಾಪೌರರಾದ ಚಮನ್ ಸಾಬ್ ಕೆ, ಪಾಲಿಕೆ ಸದಸ್ಯರಾದ ಎಸ್.ಟಿ.ವಿರೇಶ್,ಲೇಖಕರು,ಸಾಹಿತಿಗಳಾದ ಟಿ.ಎಸ್.ಶೈಲಜಾ, ಜಿಲ್ಲಾ, ನಗರ ಕೇಂದ್ರ ಗ್ರಂಥಾಲಯದ ಉಪನಿರ್ದೇಶಕರಾದ ಪಿ.ಆರ್.ತಿಪ್ಪೇಸ್ವಾಮಿ, ವಿದ್ಯಾರ್ಥಿಗಳು ಭಾಗವಹಿಸಿದ್ದರು.

---

# ಜೀವನದಲ್ಲಿ ಕ್ರೀಡೆ, ಶಿಸ್ತು, ನಡೆನುಡಿಯನ್ನು ತೊಡಗಿಸಿಕೊಂಡಾಗ ಕ್ರಿಯಾಶೀಲರಾಗಲು ಸಾಧ್ಯ

» ದಾವಣಗೆರೆ

ಶಾಲಾ ಮಕ್ಕಳು ಕ್ರೀಡೆ, ಶಿಸ್ತು, ನಡೆನುಡಿ ಹಾಗೂ ಸೇವಾ ಮನೋಭಾವ ಮೂಡಿದಾಗ ಸದಾ ಕ್ರಿಯಾಶೀಲರಾಗಲು ಸಾಧ್ಯ ಎಂದು ಜಿಲ್ಲಾಧಿಕಾರಿ ಗಂಗಾಧರಸ್ವಾಮಿ ಜಿ.ಎಂ. ತಿಳಿಸಿದರು.

ಅವರು (ನ.14) ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ವತಿಯಿಂದ ಕೊಂಡಜ್ಜಿ ಬಸಪ್ಪ ಸ್ಕೌಟ್ಸ್ ಮತ್ತು ಗೈಡ್ಸ್, ರಾಜ್ಯ ತರಬೇತಿ ಮತ್ತು ಶಿಬಿರ ಕೇಂದ್ರ ಕೊಂಡಜ್ಜಿ, ಇಲ್ಲಿ ಹಮ್ಮಿಕೊಳ್ಳಾಗಿದ್ದ. ಕೊಂಡಜ್ಜಿ ಬಸಪ್ಪನವರ 42ನೇ ಪುಣ್ಯಸ್ಮರಣೆ ಹಾಗೂ ದಿ.ಶಾಮನೂರು ಕಲ್ಲಪ್ಪ ಸಾವಿತ್ರಮ್ಮ ಆಡಳಿತ ಕಚೇರಿಯ ನೂತನ ಕಟ್ಟಡ ಮತ್ತು ದಿ.ಎಂ.ಕೆ ಪಾಣಿ ಅತಿಥಿಗೃಹ ಕಟ್ಟಡಗಳ ಉದ್ಘಾಟನೆ ನೆರವೇರಿಸಿ ಮಾತನಾಡಿದರು. ರಾಷ್ಟ್ರಭಕ್ತಿ, ನಾಡ ಭಕ್ತಿ ಬೆಳೆಸುವುದಕ್ಕೆ ಸ್ಕೌಟ್ಸ್ ಮತ್ತು ಗೈಡ್ಸ್ ಸಹಕಾರಿಯಾಗಿದೆ ಎಂದು ಹೇಳಿದರು.ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ್ ಬಿ ಇಟ್ನಾಳ್ ಮಾತನಾಡಿ ಈಗಿನ ಮಕ್ಕಳು ಸಾಮಾಜಿಕ ಮಾಧ್ಯಮಗಳ ಮೇಲೆ ತುಂಬಾ ಅವಲಂಭಿತರಾಗಿದ್ದಾರೆ. ಆದ್ದರಿಂದ ಇಂತಹ ಮಾಧ್ಯಮಗಳಿಗೆ ಹೆಚ್ಚು ಒತ್ತು ನೀಡುವ ಬದಲಿಗೆ ಸ್ಕೌಟ್ಸ್ ಮತ್ತು ಗೈಡ್ಸ್ ಅಭ್ಯಾಸದಲ್ಲಿ ತೊಡಗಿ ಕೊಂಡಾಗ ಮಾತ್ರ



ಬಹುಮುಖ ಪ್ರತಿಭೆಗಳಾಗಿ ಹೊರಹೊಮ್ಮುತ್ತಾರೆ ಎಂದು ತಿಳಿಸಿದರು. ನಮ್ಮ ಸುತ್ತಮುತ್ತಲಿನ ಸ್ನೇಹಿತರು, ಸಾರ್ವಜನಿಕರಿಗೆ. ಸ್ಕೌಟ್ಸ್ ಅಂಡ್ ಗೈಡ್ಸ್ ಮಹತ್ವದ ಬಗ್ಗೆ ತಿಳಿಸಬೇಕು ಎಂದು ಹೇಳಿದರು. ಹಾಗೂ ಬಾಲ್ಯ ವಿವಾಹಗಳ ಬಗ್ಗೆ ಮಾಹಿತಿ ಸಿಕ್ಕಲ್ಲಿ ನಮಗೆ ತಿಳಿಸಬೇಕು ಎಂದರು. ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ನ ರಾಜ್ಯ ಮುಖ್ಯ ಆಯುಕ್ತರು ಹಾಗೂ ಮಾಜಿ ಸಚಿವರಾದ ಪಿ.ಜಿ.ಆರ್ ಸಿಂಧ್ಯ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು.ಕಾರ್ಯಕ್ರಮದಲ್ಲಿ ಮಾಜಿ ವಿಧಾನ ಪರಿಷತ್ ಸದಸ್ಯರಾದ ಮೋಹನ್ ಕುಮಾರ್ ಕೊಂಡಜ್ಜಿ, ಕೊಂಡಜ್ಜಿ ಗ್ರಾಮ ಪಂಚಾಯಿತಿ ಅಧ್ಯಕ್ಷರಾದ ಕರಿಯಮ್ಮ, ಕೊಂಡಜ್ಜಿ ಬಸಪ್ಪ ಸ್ಕೌಟ್ಸ್-ಗೈಡ್ಸ್ ತರಬೇತಿ ಕೇಂದ್ರ ಅಭಿವೃದ್ಧಿ ಸಮಿತಿಯ ಅಧ್ಯಕ್ಷರು ಹಾಗೂ ರಾಜ್ಯ ಹಣಕಾಸು ಸಮಿತಿ ಸದಸ್ಯರು ಮತ್ತು ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಖಜಾಂಚಿ ಡಾ.ಕೆ.ಬಿ ಗುರುಮೂರ್ತಿ, ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಜಿಲ್ಲಾ ಮುಖ್ಯ ಆಯುಕ್ತರಾದ ಮುರುಘರಾಜೇಂದ್ರ.ಜೆ.ಚಿಗಟೇರಿ ಹಾಗೂ ಇತರರು ಭಾಗವಹಿಸಿದ್ದರು. ಸ್ಕೌಟ್ಸ್-ಗೈಡ್ಸ್ ತರಬೇತಿ ಶಿಕ್ಷಕರು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

---

## ಗಾಂಧಿನಗರದಲ್ಲಿರುವ ಅಂಗನವಾಡಿ ಕೇಂದ್ರದಲ್ಲಿ ಮಕ್ಕಳ ದಿನಾಚರಣೆ



» ಚಿತ್ರದುರ್ಗ

ನಿಸರ್ಗ ಯೋಗ ಬಂಧುಗಳ ವತಿಯಿಂದ ಗಾಂಧಿನಗರದಲ್ಲಿರುವ ಅಂಗನವಾಡಿ ಕೇಂದ್ರದಲ್ಲಿ ನೆಹರು ಜಯಂತಿ ಅಂಗವಾಗಿ ಮಕ್ಕಳ ದಿನಾಚರಣೆ ಹಾಗೂ ಕನ್ನಡ ರಾಜ್ಯೋತ್ಸವವನ್ನು ವಿಜೃಂಭಣೆಯಿಂದ ಆಚರಿಸಲಾಯಿತು.

ನಿಸರ್ಗ ಯೋಗ ಕೇಂದ್ರದ ಅಧ್ಯಕ್ಷ ರಾಮಪ್ಪ ಮಕ್ಕಳಿಗೆ ಪೆನ್ಸಿಲ್ ಹಾಗೂ ಬಿಸ್ಕೆಟ್‌ಗಳನ್ನು ವಿತರಿಸಿ ಮಾತನಾಡುತ್ತ ನೆಹರುರವರಿಗೆ ಮಕ್ಕಳೆಂದರೆ ಅಚ್ಚುಮೆಚ್ಚು. ಅದಕ್ಕಾಗಿಯೇ ಅವರ ಹುಟ್ಟುಹಬ್ಬವನ್ನು ಮಕ್ಕಳ ದಿನಾಚರಣೆಯನ್ನಾಗಿ ಆಚರಿಸಲಾಗುತ್ತದೆ. ಮುಗ್ಧ ಮಕ್ಕಳ ಮನಸ್ಸು ಖುಷಿಯಾಗಿದ್ದರೆ ಇಡಿ ಕುಟುಂಬ ಪರಿಸರ ಸುಂದರವಾಗಿರುತ್ತದೆ ಎಂಬುದು ಜವಾಹರಲಾಲ್ ನೆಹರುರವರ ಆಸೆಯಾಗಿತ್ತೆಂದು ನೆನಪಿಸಿಕೊಂಡರು.ವಿವಿಧ ಕೊಳಗೇರಿ ಸೇರಿದಂತೆ ನಾನಾ ಕಡೆ ಮಕ್ಕಳಿಗಾಗಿಯೇ ಕಾರ್ಯಕ್ರಮವನ್ನು ಆಯೋಜಿಸಿರುವುದರಿಂದ ಮಕ್ಕಳಲ್ಲಿ ಪರಸ್ಪರ ಸ್ನೇಹ ಪ್ರೀತಿ ಬಾಂಧವ್ಯ ಹಾಗೂ ಕನ್ನಡದ ಬಗ್ಗೆ ಅಭಿಮಾನ ಮೂಡಿದಂತಾಗುತ್ತದೆ ಎಂದು ಹೇಳಿದರು.

ನಿಸರ್ಗ ಯೋಗ ಕೇಂದ್ರದ ಪ್ರಧಾನ ಕಾರ್ಯದರ್ಶಿ ಎಸ್.ಸಿದ್ದರಾಜು ಮಕ್ಕಳಿಗೆ ಸಿಹಿ ವಿತರಿಸಿ ಮಾತನಾಡುತ್ತ ನೆಹರುರವರ ಹುಟ್ಟು ಹಬ್ಬವನ್ನು ಮಕ್ಕಳ ದಿನಾಚರಣೆಯನ್ನಾಗಿ ಪ್ರತಿ ವರ್ಷವು ನ.14 ರಂದು ಆಚರಿಸುತ್ತಿರುವುದನ್ನು ನೋಡಿದರೆ ಪುಟಾಣಿಗಳ ಮೇಲೆ ಅವರಿಗೆ ಎಷ್ಟೊಂದು ಮಮಕಾರವಿತ್ತೆನ್ನುವುದು ಗೊತ್ತಾಗುತ್ತದೆ. ಯೋಗ ಕೇಂದ್ರದಿಂದ ಕನ್ನಡ ರಾಜ್ಯೋತ್ಸವ ಆಚರಿಸುತ್ತಿರುವುದರಿಂದ ಚಿಕ್ಕಂದಿನಲ್ಲಿಯೇ ಮಕ್ಕಳಲ್ಲಿ ಕನ್ನಡ ನಾಡು, ನುಡಿ, ನೆಲ, ಜಲ, ಸಂಸ್ಕೃತಿಯ ಬಗ್ಗೆ ಅಭಿಮಾನ ಮೂಡಿಸಿದಂತಾಗುತ್ತದೆಂದರು.

ಯೋಗ ಕೇಂದ್ರದ ಗಾಯಕಿ ಶಬರಿ ಪ್ರಾರ್ಥಿಸಿದರು. ಅಂಗನವಾಡಿ ಶಿಕ್ಷಕಿ ಮಂಜುಳ ಸ್ವಾಗತಿಸಿದರು. ಯೋಗ ಕೇಂದ್ರದ ಖಜಾಂಚಿ ಜಯಣ್ಣ, ಯೋಗ ಮುಖ್ಯ ಶಿಕ್ಷಕಿ ವಾಸವಿ, ಇಂಜಿನಿಯರ್ ದಿವ್ಯ, ಸಮಾಜ ಸೇವಕಿ ರಂಗಮ್ಮ, ಯೋಗಪಟು ಸುಧಾ, ಅಂಗನವಾಡಿ ಕಾರ್ಯಕರ್ತೆ ಚಂದ್ರಿಕ, ಸಹಾಯಕಿಯರಾದ ರಾಜಮ್ಮ, ಪ್ರೇಮ, ಸಿದ್ದಮ್ಮ, ಮಕ್ಕಳ ಪೋಷಕರುಗಳು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

---

## ಶಿಶುಪಾಲನಾ ಕೇಂದ್ರದಲ್ಲಿ ಮಕ್ಕಳ ದಿನಾಚರಣೆ ಆಚರಣೆ

**ಚಿತ್ರದುರ್ಗ:** ಜಿಲ್ಲಾ ಪಂಚಾಯತಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಹಾಗೂ ಅಧಿರಕ್ಷಣಾ ಸಮಾಜ ಸಂಸ್ಥೆ ವತಿಯಿಂದ, ಜಿಲ್ಲಾ ಪಂಚಾಯತ್ ಕಚೇರಿಯಲ್ಲಿ ನಡೆಯುತ್ತಿರುವ ವಾತ್ಸಲ್ಯ ಶಿಶುಪಾಲನಾ ಕೇಂದ್ರದಲ್ಲಿ ಗುರುವಾರ ಮಕ್ಕಳ ದಿನಾಚರಣೆ ಆಚರಿಸಲಾಯಿತು. ಈ ವೇಳೆ ಮಕ್ಕಳಿಗೆ ಕೇಕ್ ಹಾಗೂ ಸಿಹಿ ತಿನಿಸು ವಿತರಿಸಲಾಯಿತು. ಮಕ್ಕಳಿಗಾಗಿ ಆಟ, ಹಾಡು, ಹಾಗೂ ನೃತ್ಯ ಕಾರ್ಯಕ್ರಮಗಳನ್ನು ಆಯೋಜಿಸಲಾಗಿತ್ತು. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ಭಾರತಿ ಆರ್ ಬಣಕಾರ, ಮಹಿಳಾ ಮತ್ತು ಮಕ್ಕಳ ಕಲ್ಯಾಣಾಧಿಕಾರಿ ಪವಿತ್ರ ಮಕ್ಕಳೊಂದಿಗೆ ಪಾಲ್ಗೊಂಡು ಸಂಭ್ರಮಿಸಿದರು.ಶಿಕ್ಷಕಿ ಎಸ್.ಪಿ.ವಿದ್ಯಾವತಿ, ಸಹಾಯಕರಾದ ಆಶಾ ಮತ್ತು ಮಧು ಉಪಸ್ಥಿತರಿದ್ದರು.



---

## ಪ್ರಮುಖ ಸುದ್ದಿ

ಹೊಸದುರ್ಗ ಬಾಲಕಿಯರ ಹಾಸ್ಟಲ್‌ಗಳಿಗೆ ತಹಶಿಲ್ದಾರ್ ಬೇಟಿ ಪರಿಶೀಲನೆ,ಮೆಚ್ಚುಗೆ

# ಮಕ್ಕಳಿಗೆ ನೀಡುವ ಆಹಾರ ಗುಟ್ಟ ಮಟ್ಟದಿಂದ ಕೂಡಿರಲಿ

» ಹೊಸದುರ್ಗ

ಯಾವುದೇ ಹಾಸ್ಟಲ್ ಇರಲಿ, ಅಲ್ಲಿ ವಿದ್ಯಾರ್ಥಿಗಳಿಗೆ ನೀಡುವ ಉಪಹಾರ ಉತ್ತಮ ಗುಣಮಟ್ಟದಿಂದ ಕೂಡಿರಲಿ ಹಾಗೆಯೇ ವಸತಿ ನಿಲಯಗಳಲ್ಲಿ ಸ್ವಚ್ಚತೆ ಇರಲಿ ಈ ಎರಡೂ ವಿಷಯದಲ್ಲಿ ಇಲ್ಲಿನ ಡಾ:ಬಿ.ಆರ್.ಅಂಬೇಡ್ಕರ್ ಸರ್ಕಾರಿ ಮೆಟ್ರಿಕ್ ನಂತರದ ಎ ಮತ್ತು ಬಿ ಬಾಲಕಿಯರ ವಿದ್ಯಾರ್ಥಿ ನಿಲಯ ತನ್ನ ಗುಣ ಮಟ್ಟವನ್ನ ಕಾಪಾಡಿಕೊಂಡು ಬರುತ್ತಿದೆ ಎಂದು ತಹಶಿಲ್ದಾರ್ ತಿರುಪತಿ ಪಾಟೀಲ್ ಮೆಚ್ಚುಗೆ ವ್ಯಕ್ತಪಡಿಸಿದರು.

ಅವರು ಪಟ್ಟಣದ ಎನ್.ಇ.ಎಸ್ ಬಡಾವಣೆಯಲ್ಲಿರುವ ಡಾ:ಬಿ.ಆರ್. ಅಂಬೇಡ್ಕರ್ ಸರ್ಕಾರಿ ಮೆಟ್ರಿಕ್ ನಂತರದ ಎ ಮತ್ತು ಬಿ ಬಾಲಕಿಯರ ವಿದ್ಯಾರ್ಥಿ ನಿಲಯಕ್ಕೆ ಬೇಟಿ ನೀಡಿ ಎ ಮತ್ತು ಬಿ ಬಾಲಕಿಯರ ವಿದ್ಯಾರ್ಥಿ ನಿಲಯವನ್ನ ಪರಿಶೀಲಿಸಿ ನಂತರ ಸುದ್ದಿಗಾರರೊಂದಿಗೆ ಮಾತನಾಡಿದರು.ಇಲ್ಲಿನ ಹಾಸ್ಟೆಲ್ ವಾರ್ಡನ್ ವಿಜಯಲಕ್ಷ್ಮಿಯವರು ಮಕ್ಕಳೊಂದಿಗೆ ಬೆರೆತು ಅವರ ಸಮಸ್ಯೆಗಳಿಗೆ



ಸ್ಪಂದಿಸುತ್ತಿದ್ದಾರೆ ಎಂಬ ವಿಷಯ ಹಾಸ್ಟೆಲ್ ವಿದ್ಯಾರ್ಥಿನಿಯರಿಂದ ತಿಳಿದು ಬಂದಿದ್ದು ಅವರು ತಮ್ಮ ಕರ್ತವ್ಯವನ್ನ ಜವಾಬ್ದಾರಿಯಿಂದ ನಿರ್ವಹಿಸುತ್ತಿದ್ದಾರೆ ಎಂಬ ವಿಷಯ ಇಲ್ಲಿಗೆ ಬೇಟಿ ನೀಡಿ ಪರಿಶೀಲಿಸಿದ ನಂತರ ತಿಳಿಯಿತು.

ಹೊಸದುರ್ಗಪಟ್ಟಣದಲ್ಲಿಬಾಲಕರಮತ್ತು ಬಾಲಕಿಯರ ಅನೇಕ ಹಾಸ್ಟಲ್‌ಗಳಿವೆ ಈ ಕೆಲವೊಂದು ಹಾಸ್ಟೆಲ್‌ಗಳಲ್ಲಿ ಕೆಲವೊಂದು ಸಮಸ್ಯೆಗಳೂ ಕೂಡ ಇವೆ ಮಂದಿನ ದಿನಗಳಲ್ಲಿ ಸರ್ಕಾರದ ನಿರ್ಧೇಶನದಂತೆ ಪಟ್ಟಣದ ಪ್ರತಿಯೊಂದು ಹಾಸ್ಟೆಲ್‌ಗಳಿಗೂ ಸಹಾ ಬೇಟಿ ನೀಡಿ ಪರಿಶೀಲಿಸಲಾಗುವುದು ಎಂದು ತಿಳಿಸಿದ ಅವರು ಕೆಲವೊಂದು ಹಾಸ್ಟೆಲ್‌ಗಳಲ್ಲಿ ಸ್ವಚ್ಚತೆ ಇಲ್ಲ ಹಾಗೂ ವಿದ್ಯಾರ್ಥಿಗಳಿಗೆ ಉತ್ತಮ ಗುಣ ಮಟ್ಟದ ಆಹಾರ ನೀಡುತ್ತಿಲ್ಲ ಕೆಲವು ಹಾಸ್ಟಲ್‌ಗಳ ವಾರ್ಡನ್‌ಗಳು ವಿದ್ಯಾರ್ಥಿಗಳ ಜೋತೆ ಉದ್ಧಟತನದಿಂದ ವರ್ತಿಸುತ್ತಿದ್ದಾರೆ ಎಂಬ ದೂರುಗಳೂ ಕೂಡ ಕೇಳಿ ಬರುತಿದ್ದು ಮುಂದಿನ ದಿನಗಳಲ್ಲಿ ಈ ಎಲ್ಲ ಸಮಸ್ಯೆಗಳನ್ನ ಸರಿಪಡಿಸುವಂತೆ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದರು.

ತಹಶಿಲ್ದಾರ್ ತಿರುಪತಿ ಪಾಟೀಲ್ ಹಾಸ್ಟೆಲ್‌ಗೆ ಬೇಟಿ ನೀಡಿದಾಗ ಅವರು ವಿದ್ಯಾರ್ಥಿನಿಯರೊಂದಿಗೆ ಹಾಸ್ಟೆಲ್ ವಿಚಾರವಾಗಿ ಮಾಹಿತಿ ಪಡೆದರು, ನಂತರ ಹಾಸ್ಟಲ್‌ನಲ್ಲಿ ಕುಳಿತು ರಾಗಿ ಮುದ್ದೆ ಅನ್ನ ಸಂಬಾರ್ ಸೇವಿಸಿ ಅಡುಗೆ ತುಂಭಾ ಚೆನ್ನಾಗಿದೆ ಎಂಬ ಮೆಚ್ಚುಗೆಯನ್ನ ವ್ಯಕ್ತಪಡಿಸಿದ ಅವರು ಮಕ್ಕಳು ಬಳಸುವ ಸೋಪು, ಎಣ್ಣೆ ಮತ್ತಿತರೆ ನಿತ್ಯ ಬಳಸುವ ಪರಿಕರಗಳನ್ನು ಪರಿಶೀಲನೆ ಮಾಡಿದರು. ಹಾಸ್ಟೆಲ್‌ಗಳಲ್ಲಿ ವಿದ್ಯಾರ್ಥಿಗಳು ಮೋಬೈಲ್ ಬಳಸುವಂತಿಲ್ಲ ವಿದ್ಯಾರ್ಥಿಗಳು ತಮ್ಮ ಅಮೂಲ್ಯವಾದ ಸಮಯವನ್ನ ಕೇವಲ ಜ್ಞಾನಾರ್ಜನೆಗೆ ಮಾತ್ರ ಮೀಸಲಿರಬೇಕು ಎಂಬ ಎಚ್ಚರಿಕೆಯ ಮಾತುಗಳನ್ನಾಡಿದ ಅವರು ಹಾಸ್ಟಲ್‌ನಲ್ಲಿ ಯಾರಾದರು ಮೊಬೈಲ್ ಬಳಸುವುದು ಕಂಡು ಬಂದರೆ ಅಂತವರ ವಿರುದ್ದ ಸೂಕ್ತ ಕ್ರಮ ಕೈಗೊಳ್ಳಿ ಎಂದು ವಾರ್ಡನ್ ಶ್ರೀಮತಿ ವಿಜಯಲಕ್ಷ್ಮೀ ಅವರಿಗೆ ಸೂಚಿಸಿದರು. ಈ ಸಂಧರ್ಬದಲ್ಲಿ ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕ ಗೋಪಾಲಪ್ಪ ಉಪಸ್ಥಿತರಿದ್ದರು.


Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T